# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 74 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 21–09–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 74 | Title- Code: KARKAN 28269 | Chitradurga | Date: 21-09-2023 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಖಾಸಗಿ ಅನುದಾನ ರಹಿತ ಶಾಲಾ ಆಡಳಿತಮಂಡಳಿಯಿಂದ ಶೈಕ್ಷಣಿಕ ಕಾರ್ಯಾಗಾರ 2

ಶ್ರೀಗಣೇಶನ ಹಬ್ಬದ ಆಚರಣೆ ನಮ್ಮೆಲ್ಲರ ಸ್ವಾಭಿಮಾನದ ಸಂಕೇತ: ಸಂಜೀವಮೂರ್ತಿ 3

ಅಂಗನವಾಡಿ ಕೇಂದ್ರಗಳಲ್ಲಿ ಪೌಷ್ಟಿಕ ಆಹಾರ ನೀಡಲು ಸೂಚನೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ವಿನಾಯಕ ಚಿತ್ರಮಂದಿರ ಬಳಿ ಆಕಸ್ಮಿಕ ಬೆಂಕಿ ಅವಘಡ 8 ಮನೆ ಭಸ್ಮ

» ಬೆಂಗಳೂರು

ವಿಘ್ನ ನಿವಾರಕ ಗಣೇಶ ಚತುರ್ಥಿ ದಿನದಂದೇ ನಗರದಲ್ಲಿ ಅಗ್ನಿ ಅವಘಡ ಸಂಭವಿಸಿ ಕೆನ್ನಾಲಿಗೆಗೆ 8 ಮನೆಗಳು ಬೆಂಕಿಗಾಹುತಿಯಾಗಿ ಇಬ್ಬರು ಗಾಯುಗೊಂಡಿದ್ದಾರೆ.ಚಾಮರಾಜಪೇಟೆಯು ಆನಂದಪುರದ ವಿನಾಯಕ ಚಿತ್ರಮಂದಿರರದ ಬಳಿಯ ಗೋದಾಮಿನಲ್ಲಿ ಅಗ್ನಿ ಅವಘಡ ಸಂಭವಿಸಿದ್ದು, ಗೋದಾಮು ಹಾಗೂ 8 ಶೀಟ್ ಮನೆಗಳು ಬೆಂಕಿಗಾಹುತಿಯಾಗಿವೆ. ಘಟನೆಯಲ್ಲಿ ಒಬ್ಬರಿಗೆ ಗಾಯಗಳಾಗಿದ್ದು, ವಿಷಯ ತಿಳಿದು ಘಟನಾ ಸ್ಥಳಕ್ಕೆ ಎರಡು ಅಗ್ನಿಶಾಮಕ ವಾಹನಗಳು ದೌಡಾಯಿಸಿ ಬೆಂಕಿ ನಂದಿಸಿವೆ.ಗೋದಾಮಿನಲ್ಲಿ ಎರಡು ಸಿಲಿಂಡರ್‌ಗಳು ಸ್ಫೋಟಗೊಂಡು ಅಗ್ನಿ ದುರಂತ ಸಂಭವಿಸಿದೆ ಎಂದು ಹೇಳಲಾಗಿದ್ದು, ಅಗ್ನಿ ಶಾಮಕ ಸಿಬ್ಬಂದಿ ಬೆಂಕಿ ನಂದಿಸುವ ಕಾರ್ಯದಲ್ಲಿ ತೊಡಗಿದ್ದಾರೆ. ಅಗ್ನಿ ಅವಘಡದಲ್ಲಿ ಗಾಯೊಂಡಿರುವ ಓರ್ವ ವ್ಯಕ್ತಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅದೃಷ್ಟವಶಾತ್ ಘಟನೆಯಲ್ಲಿ ಯಾವುದೇ ಪ್ರಾಣಾಪಾಯವಾಗಿಲ್ಲ ಎಂದು ತಿಳಿದುಬಂದಿದೆ. ಅಗ್ನಿ ಅವಘಡದ ಬಗ್ಗೆ ಪ್ರತ್ಯಕ್ಷದರ್ಶಿ ಸೈಯ್ಯದ್ ಮಾತನಾಡಿ, ಸಾಕೆಟ್ ಬೋರ್ಡ್‌ನಲ್ಲಿ ಮೊದಲು ಬೆಂಕಿ ಕಾಣಿಸಿಕೊಂಡಿದೆ. ಮನೆಯಲ್ಲಿದ್ದ ಮಹಿಳೆಯರು ಬೆಂಕಿ ಹೊತ್ತಿದ್ದ ಬಗ್ಗೆ ಮನೆಯಿಂದ ಹೊರಗೆ ಓಡಿ ಬಂದು ನನಗೆ ಮಾಹಿತಿ ನೀಡಿದರು. ಅಷ್ಟರಲ್ಲಿ ಮನೆಯಲ್ಲಿದ್ದ ಸಿಲಿಂಡರ್ ಸ್ಫೋಟದ ಜೊತೆ ಬೆಂಕಿ ಹರಡಿತ್ತು. ತಕ್ಷಣ ಅಗ್ನಿಶಾಮಕ ಕಚೇರಿಗೆ ಕರೆ ಮಾಡಿ ಮಾಹಿತಿ ನೀಡಿದೆ. ಎಲ್ಲರೂ ಹೊರಗೆ ಓಡಿ ಬಂದಿದ್ದರಿಂದ ಯಾರಿಗೂ ಗಾಯಗಳಾಗಿಲ್ಲ ಎಂದು ಮಾಹಿತಿ ನೀಡಿದರು.

### ಕರ್ನಾಟಕ ಸಂಭ್ರಮ 50: ಆಸಕ್ತರಿಂದ ಲಾಂಛನದ ಮಾದರಿಗಳ ಆಹ್ವಾನ

» ಚಿತ್ರದುರ್ಗ

ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣವಾಗಿ 50 ವರ್ಷಗಳು ಪೂರ್ಣಗೊಳ್ಳಲಿರುವ ಸುವರ್ಣ ಮಹೋತ್ಸವದ ಸುಸಂದರ್ಭದಲ್ಲಿ " ಕರ್ನಾಟಕ ಸಂಭ್ರಮ 50" "ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ" ಎಂಬ ಶೀರ್ಷಿಕೆಯಡಿ ರಾಜ್ಯಾದ್ಯಂತ ವರ್ಷಪೂರ್ತಿ ವೈವಿಧ್ಯಮಯವಾಗಿ, ವರ್ಣಮಯವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸುವ ಮೂಲಕ ಇದಕ್ಕೊಂದು ವಿಶೇಷ ಮೆರಗು ನೀಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಉದ್ದೇಶಿಸಿದೆ. ಕಾರ್ಯಕ್ರಮದ ಸಂಭ್ರಮವನ್ನು ಹೆಚ್ಚಿಸಲು ಕನ್ನಡ ನಾಡು–ನುಡಿ–ಸಂಸ್ಕೃತಿಯನ್ನು ಬಿಂಬಿಸುವ ವಿಶಿಷ್ಟವಾದ ಲಾಂಛನ(ಲೋಗೋ)ವನ್ನು ಬಳಸಲು ತೀರ್ಮಾನಿಸಲಾಗಿದ್ದು, ಆಸಕ್ತರಿಂದ ಸುಂದರವಾದ ಲಾಂಛನ (ಲೋಗೋ)ದ ಮಾದರಿಗಳನ್ನು ಆಹ್ವಾನಿಸಲಾಗಿದೆ. ಆಯ್ಕೆಯಾಗುವ ಮಾದರಿ ಲಾಂಛನಕ್ಕೆ ರೂ.25,000/–ಗಳ ಬಹುಮಾನವನ್ನು ನಿಗದಿಪಡಿಸಲಾಗಿದೆ. ಲಾಂಛನ (ಲೋಗೋ)ದ ಮಾದರಿಯನ್ನು ಕಳುಹಿಸಲು ಸೆ.30 ರವರೆಗೆ ಅವಕಾಶವಿದ್ದು, ಆಸಕ್ತರು ಜಾಲತಾಣ https://www.kannadasiri.karnataka.gov.in ದಲ್ಲಿ ಪಡೆಯಬಹುದಾಗಿದೆ.

ಹಿರಿಯ ನಾಗರಿಕರ ಕ್ರೀಡಾ, ಸಾಂಸ್ಕೃತಿಕ ಸ್ಪರ್ಧೆ ಕಾರ್ಯಕ್ರಮದಲ್ಲಿ ಮಹಿಳಾ, ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ

# ಕ್ರೀಡೆಯಿಂದ ಮನಸ್ಸು, ದೇಹ ಸದೃಢ





» ಚಿತ್ರದುರ್ಗ

ಬದಲಾದ ಜೀವನ ಶೈಲಿಯಲ್ಲಿ ಕ್ರೀಡೆ ಜೀವನದಲ್ಲಿ ಅತ್ಯಂತ ಪ್ರಮುಖ ಪಾತ್ರವಹಿಸುತ್ತದೆ. ಹಿರಿಯ ನಾಗರಿಕರು ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸುವುದರಿಂದ ಅವರ ದೇಹ ಹಾಗೂ ಮನಸ್ಸು ಸದೃಢವಾಗಿರುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಹೇಳಿದರು.

ನಗರದ ವೀರ ವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಜಿಲ್ಲಾ ಸಂಘ, ರೋಟರಿ ಕ್ಲಬ್ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದಲ್ಲಿ ಹಿರಿಯ ನಾಗರಿಕರಿಗೆ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಿತ್ಯವೂ ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ದೇಹವು ಚಟುವಟಿಕೆಯಿಂದ ಇರುವುದರಿಂದಮನಸ್ಸಿಗೆಆಹ್ಲಾದಸಿಗಲಿದೆ. ದೇಹವು ಸುಸ್ಥಿತಿಯಲ್ಲಿರಬೇಕಾದರೆ ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳು ಪ್ರಮುಖವಾಗಿರುತ್ತವೆ. ಕ್ರೀಡೆ ಸೇರಿದಂತೆ ಯಾವುದಾದರೂ ಒಂದು ಚಟುವಟಿಯಲ್ಲಿ ಸಕ್ರಿಯವಾಗಿ, ಕ್ರಿಯಾತ್ಮಕವಾಗಿ ಭಾಗವಹಿಸುವುದರಿಂದ ಏಕತಾನತೆ, ಒಂಟಿತನದಿಂದ ಹೊರಬರಬಹುದು ಎಂದರು.

ರಾಜ್ಯ ಸರ್ಕಾರಿ ನಿವೃತ್ತ ನೌಕರರ ಜಿಲ್ಲಾ ಘಟಕದ ಅಧ್ಯಕ್ಷ ಆರ್. ರಂಗಪ್ಪರೆಡ್ಡಿ ಮಾತನಾಡಿ, ಈ ಹಿಂದೆ ಹಿರಿಯ ನಾಗರಿಕರಿಗಾಗಿ ಸರ್ಕಾರದ ವತಿಯಿಂದ ಯಾವುದೇಸಮಾರಂಭಗಳುಇರುತ್ತಿರಲಿಲ್ಲ. ಇತ್ತೀಚೆಗೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ಹಿರಿಯ ನಾಗರಿಕರಿಗಾಗಿ ಬಹಳಷ್ಟು ಉತ್ತೇಜನ ನೀಡುತ್ತಿವೆ. ಆರೋಗ್ಯ ತಪಾಸಣೆ ಶಿಬಿರಗಳು, ಕ್ರೀಡಾಕೂಟಗಳನ್ನು ಹಮ್ಮಿಕೊಳ್ಳುತ್ತಿರುವುದು ಸಂತಸದ ಸಂಗತಿ. ಕ್ರೀಡೆಯಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಕ್ರೀಡೆಯಲ್ಲಿ ಆಸಕ್ತಿ ಇರಬೇಕು. ಪ್ರತಿಯೊಬ್ಬ ಹಿರಿಯ ನಾಗಕರಿಕರು ಇದರ ಸದುಪಯೋಗ ಪಡೆದುಕೊಳ್ಳುವುದರ ಜೊತೆಗೆ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು.


ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ. ವೈಶಾಲಿ ಮಾತನಾಡಿ, ಜೀವನದಲ್ಲಿ ಪ್ರತಿಯೊಬ್ಬರಿಗೂ ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳು ಅತ್ಯಮೂಲ್ಯವಾಗಿರುತ್ತವೆ. ಹಿರಿಯ ನಾಗಕರಿಕರು ಮನೆಯಲ್ಲಿ ಇದ್ದು, ಮಾನಸಿಕವಾಗಿ ಕುಗ್ಗಿರುತ್ತಾರೆ. ಆದ್ದರಿಂದ ಅವರಿಗೆ ಈ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದ್ದು, ಈ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳುವುದರಿಂದ ದೇಹ ಹಾಗೂ ಮನಸ್ಸು ಸದೃಢವಾಗಿರುತ್ತದೆ ಎಂದರು.

ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಅಕ್ಟೋಬರ್ 1 ರಂದು ಚಿತ್ರದುರ್ಗ ನಗರದ ತರಾಸು ರಂಗಮಂದಿರದಲ್ಲಿನಡೆಯುವವಿಶ್ವಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಿ ಸನ್ಮಾನಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಸುಚೇತ ಎಂ. ನೆಲವಗಿ, ರೋಟರಿ ಕ್ಲಬ್ ಅಧ್ಯಕ್ಷ ವಿ.ಜಿ.ಎಸ್. ಕನಕರಾಜ್, ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ ನೋಡಲ್ ಅಧಿಕಾರಿ ಜಿ. ಹರಿಪ್ರಸಾದ್, ನಿವೃತ್ತ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎಂ.ಹೆಚ್.ಜಯಣ್ಣ, ದೈಹಿಕ ಶಿಕ್ಷಣ ಶಿಕ್ಕರು, ಚಿತ್ರಕಲಾ ಹಾಗೂ ಸಂಗೀತ ಶಿಕ್ಷಕರು, ಹಿರಿಯ ನಾಗರಿಕರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಕಾವೇರಿ ನೀರು ಬಿಟ್ಟಿದ್ದು ಏಕೆ: ಕುಮಾರಸ್ವಾಮಿ

» ಬೆಂಗಳೂರು



ಕಾವೇರಿ ನೀರು ಹಂಚಿಕೆಯ ಬಗ್ಗೆ ಸಂಕಷ್ಟ ಸೂತ್ರ ಇಲ್ಲ ಎಂದ ಮೇಲೆ ಕಾವೇರಿ ನೀರು ಬಿಟ್ಟಿದ್ದು ಏಕೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ. ಚೆನ್ನಪಟ್ಟಣದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಕಷ್ಟ ಸೂತ್ರವನ್ನು ಯಾರು ರೂಪಿಸಬೇಕು. ಅದಕ್ಕೆ ರಾಜ್ಯ ಏನು ಮಾಡಬೇಕು ಎಂದು ಯೋಚನೆ ಮಾಡದೆ ಹೇಳಿಕೆಗಳನ್ನು ಕೊಡುತ್ತಿದ್ದಾರೆ. ಇದರಿಂದ ಏನು ಪ್ರಯೋಜನ. ಸಂಕಷ್ಟ ಸೂತ್ರ ರಚನೆಗೆ ಇಷ್ಟೊತ್ತಿಗೆ ರಾಜ್ಯ ಹೋರಾಟ ನಡೆಸಬೇಕಿತ್ತು ಎಂದು ಹೇಳಿದರು. ಕಾವೇರಿ ನೀರು ನಿರ್ವಹಣಾ ಸಮಿತಿ ಹಾಗೂ ನಿಯಂತ್ರಣ ಸಮಿತಿಯವರು ದೇವಲೋಕದಿಂದ ಬಂದಿಲ್ಲ. ನಾವು ನೇಮಕ ಮಾಡಿದ ಸದಸ್ಯರೇ ಅಲ್ಲವೇ. ಈಗ ನೋಡಿದರೆ ನಮ್ಮ ರಾಜ್ಯದ ಜನರ ಮೇಲೆ ಸವಾರಿ ಮಾಡುತ್ತಿದ್ದಾರೆ ಎಂದು ಕಿಡಿ ಕಾರಿದರು. ದೆಹಲಿಯಲ್ಲಿ ಇಂದು ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳು ಸಂಸದರ ಸಭೆಯಲ್ಲಿ ಏನೆಲ್ಲ ಚರ್ಚೆ ಮಾಡಿದರು ಎಂಬ ಮಾಹಿತಿಯೂ ಇದೆ. ಹೊರ ನೋಟಕ್ಕೆ ನಾವು ಒಗ್ಗಟ್ಟಾಗಿದ್ದೇವೆ ಎಂದು ಹೇಳಿಕೆ ಕೊಟ್ಟರೆ ಪ್ರಯೋಜನವೇನು, ಸಂಸದರನ್ನು ಕೂರಿಸಿಕೊಂಡು ಇವರು ಭಾಷಣ ಮಾಡಲು ದೆಹಲಿಗೆ ಹೋಗಿದ್ದಾರಾ ಎಂದು ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು. ಸುಪ್ರೀಂಕೋರ್ಟಿನ ಮುಂದೆ ಅರ್ಜಿ ಹಾಕಿ ವಾಸ್ತವ ಪರಿಸ್ಥಿತಿಯನ್ನು ತಿಳಿಸುವುದನ್ನು ಬಿಟ್ಟು ಅರ್ಜಿ ಸಲ್ಲಿಸುವುದಕ್ಕೇ ಆಲೋಚನೆ ಮಾಡುತ್ತಿದೇವೆ ಎಂದೆಲ್ಲ ಹೇಳುತ್ತಿದ್ದಾರೆ. ತಮಿಳುನಾಡಿಗೆ ನೀರು ಹರಿದು ಹೋದ ಮೇಲೆ ಇವರು ಕ್ರಮ ಕೈಗೊಳ್ಳುತ್ತಾರಾ ಎಂದು ಪ್ರಶ್ನಿಸಿದರು.

## ಜಿಲ್ಲಾ ಹಾಪ್‌ಕಾಮ್ಸ್: ಸೆ.22ರಂದು 38ನೇ ವಾರ್ಷಿಕ ಮಹಾಸಭೆ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ತೋಟದ ಉತ್ಪನ್ನಗಳ ಬೆಳೆಗಾರರ ಸಹಕಾರ ಮಾರಾಟ ಮತ್ತು ಸಂಸ್ಕರಣ ಸಂಘದ (ಜಿಲ್ಲಾ ಹಾಪ್‌ಕಾಮ್ಸ್) 38ನೇ ವಾರ್ಷಿಕ ಮಹಾಸಭೆಯನ್ನು ಇದೇ ಸೆಪ್ಟೆಂಬರ್ 22ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ತುರುವನೂರು ರಸ್ತೆಯ ಜಿಲ್ಲಾ ಹಾಪ್‌ಕಾಮ್ಸ್ ಸಂಘದ ಕಚೇರಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಹಾಪ್‌ಕಾಮ್ಸ್ ಅಧ್ಯಕ್ಷ ಕೆ.ಎಮ್. ತಿಪ್ಪೇಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ ಎಂದು ಜಿಲ್ಲಾ ಹಾಪ್‌ಕಾಮ್ಸ್ ವ್ಯವಸ್ಥಾಪಕ ನಿರ್ದೇಶಕ ಟಿ.ಆರ್. ಯಶವಂತ ಕುಮಾರ್ ತಿಳಿಸಿದ್ದಾರೆ.






ಪ್ರಮುಖ ಸುದ್ದಿ

# ಡಿಸಿಎಂ ಹುದ್ದೆ ಹೈಕಮಾಂಡ್ ತೀರ್ಮಾನ ಮಾಡುತ್ತೆ: ಸಚಿವ ಸತೀಶ್ ಜಾರಕಿಹೊಳಿ

» ಬೆಳಗಾವಿ



ರಾಜ್ಯಕ್ಕೆ ಮೂರು ಉಪಮುಖ್ಯಮಂತ್ರಿ ಹುದ್ದೆ ಅಗತ್ಯವಿದೆಯೇ ಎಂಬುದನ್ನು ಹೈಕಮಾಂಡ್ ತೀರ್ಮಾನ ಮಾಡಲಿದೆ. ಇದೀಗ ಕೇವಲ ಸಚಿವ ಕೆ.ಎನ್.ರಾಜಣ್ಣ ಇಂಥ ಬೇಡಿಕೆ ಮುಂದಿಟ್ಟಿದ್ದಾರೆ ಅಷ್ಟೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಮೂರು ಉಪ ಮುಖ್ಯಮಂತ್ರಿ(ಡಿಸಿಎಂ) ಹುದ್ದೆ ಸೃಷ್ಟಿಸುವಂತೆ ಹೈಕಮಾಂಡ್‌ಗೆ ಕೆ.ಎನ್.ರಾಜಣ್ಣ ಅವರು ಪತ್ರಬರೆದಿರುವ ವಿಚಾರ ತಿಳಿದಿದೆ. ರಾಜಣ್ಣ ಹೇಳಿದ ಮೇಲೆ ಚರ್ಚೆ ಶುರುವಾಗಬಹುದು.

ಡಿಸಿಎಂ ಹುದ್ದೆ ಅಗತ್ಯ ಇದೆಯೋ, ಇಲ್ವೋ ಎನ್ನುವುದನ್ನು ಪಕ್ಷ ತೀರ್ಮಾನ ಮಾಡಬೇಕು. ಉಪಮುಖ್ಯಮಂತ್ರಿ ಸ್ಥಾನ ಬೇಕೆಂದು ಬಹಳಷ್ಟು ಜನ ಹೇಳಿದ್ದಾರೆ. ಅವರವರ ಸಾಮರ್ಥ್ಯ ನೋಡಿ ಪಕ್ಷ ಆ ಸ್ಥಾನ ನೀಡುತ್ತದೆ. ಆದರೆ, ನಾನಂತೂ ಡಿಸಿಎಂ ಹುದ್ದೆ ಆಕಾಂಕ್ಷಿಯಲ್ಲ ಎಂದು ಹೇಳಿದರು. ಇದೇ ವೇಳೆ ಗೃಹ ಸಚಿವ ಜಿ.ಪರಮೇಶ್ವರ್ ಅವರು ಪಕ್ಷದ ಮುಖಂಡ ಬಿ.ಕೆ. ಹರಿಪ್ರಸಾದ್ ಅವರ ಮನೆಗೆ ಹೋಗಿರುವುದು ನಿಜ ಎಂದಿರುವ ಸತೀಶ್ ಜಾರಕಿಹೊಳಿ, ಹರಿಪ್ರಸಾದ್ ಅವರು ನಮ್ಮ ಪಕ್ಷದ ಹಿರಿಯ ನಾಯಕರು. ಅವರನ್ನು ಭೇಟಿಯಾಗಿ ಪಕ್ಷದ ವಿಚಾರವಾಗಿ ಚರ್ಚೆ ನಡೆಸಿದ್ದೇವೆಂದರು.

3 ಡಿಸಿಎಂ ಹೈಕಮಾಂಡ್‌ಗೆ ಬಿಟ್ಟದ್ದು: ರಾಜ್ಯದಲ್ಲಿ ಮೂವರು ಡಿಸಿಎಂಗಳನ್ನು ಮಾಡಬೇಕು ಎಂದು ಸಚಿವ ಕೆ.ಎನ್. ರಾಜಣ್ಣ ಹೇಳಿದ್ದಾರೆ. ಆದರೆ, ಈ ಬಗ್ಗೆ ಹೈಕಮಾಂಡ್ ನಿರ್ಧಾರ ಕೈಗೊಳ್ಳಬೇಕಲ್ವೇ? ಈ ವಿಚಾರದಲ್ಲಿ ನನಗೇನಿಲ್ಲ. ಹೈಕಮಾಂಡ್ ಏನು ಹೇಳುತ್ತೋ ಅದನ್ನು ಮಾಡುವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ನಗರದಲ್ಲಿ ಸುದ್ದಿಗಾರರ ಜೊತೆ ಅವರು ಮಾತನಾಡಿದರು.

ಪುಟ 2

## ಫಾಸ್ಟ್ ನ್ಯೂಸ್

### ಡಿಸಿಎಂ ಹುದ್ದೆ ಹೈಕಮಾಂಡ್ ತಿರ್ಮಾನ ಮಾಡುತ್ತೆ: ಜಾರಕಿಹೊಳಿ

» **ಮೊದಲ ಪುಟದಿಂದ**

ರಾಜ್ಯದಲ್ಲಿ ಮೂರು ಡಿಸಿಎಂಗಳು ಬೇಕೆಂದು ಸಹಕಾರ ಸಚಿವ ರಾಜಣ್ಣ ಅವರು ಪಕ್ಷದ ಹೈಕಮಾಂಡ್‌ಗೆ ಪತ್ರ ಬರೆಯುವುದಾಗಿ ಹೇಳಿದ್ದಾರಲ್ಲ ಎಂಬ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿಎಂ, ಸಂಪುಟದಲ್ಲಿ ಈಗಾಗಲೇ ಒಬ್ಬರು ಡಿಸಿಎಂ ಇದ್ದಾರೆ. ಆದರೆ, ಮೂವರು ಡಿಸಿಎಂಗಳನ್ನು ಮಾಡಬೇಕು ಎಂದು ರಾಜಣ್ಣ ಹೇಳಿದ್ದಾರೆ. ಈ ಬಗ್ಗೆ ಹೈಕಮಾಂಡ್ ಜೊತೆ ಮಾತನಾಡುತ್ತೀನಿ ಅಂತಲೂ ಹೇಳಿದ್ದಾರೆ. ಅವರು ಮಾತನಾಡಲಿ. ಅಂತಿಮವಾಗಿ ಈ ಬಗ್ಗೆ ಹೈಕಮಾಂಡ್ ತೀರ್ಮಾನ ಮಾಡಬೇಕಲ್ವೆ? ಈ ವಿಚಾರದಲ್ಲಿ ನನಗೇನಿಲ್ಲ. ಹೈಕಮಾಂಡ್ ಏನು ಹೇಳುತ್ತೋ ಅದನ್ನು ಮಾಡುತ್ತೇನೆ ಎಂದರು.

### ಬೆಳಗಟ್ಟ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ: ಸೆ.25ರಂದು ವಾರ್ಷಿಕ ಮಹಾಸಭೆ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ಬೆಳಗಟ್ಟ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ 2022-23ನೇ ಸಾಲಿನ ವಾರ್ಷಿಕ ಮಹಾಸಭೆಯನ್ನು ಇದೇ ಸೆಪ್ಟೆಂಬರ್ 25ರಂದು ಬೆಳಿಗ್ಗೆ 11 ಗಂಟೆಗೆ ಬೆಳಗಟ್ಟ ಸಂಘದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಬೆಳಗಟ್ಟ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಅಧ್ಯಕ್ಷ ಎ.ಆರ್.ಸಂಪತ್ ಕುಮಾರ್ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ.

### ಸೆ.23ರಂದು ಜಿಲ್ಲಾಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟನೆ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಕ್ರೀಡಾ ಪ್ರಾಧಿಕಾರ ಮತ್ತು ವಿವಿಧ ಕ್ರೀಡಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಚಿತ್ರದುರ್ಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟನಾ ಸಮಾರಂಭವನ್ನು ಸೆಪ್ಟೆಂಬರ್ 23ರಂದು ಬೆಳಿಗ್ಗೆ 10.30 ಗಂಟೆಗೆ ಚಿತ್ರದುರ್ಗ ನಗರದ ವೀರ ವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಘನ ಉಪಸ್ಥಿತಿವಹಿಸುವರು. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕ್ರೀಡಾಜ್ಯೋತಿ ಉದ್ಘಾಟನೆ ನೆರವೇರಿಸುವರು. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ ಗೌಡ, ಕೆ.ಎಸ್.ನವೀನ್ ಭಾಗವಹಿಸುವರು. ವಿಶೇಷ ಆಹ್ವಾನಿತರಾಗಿ ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂಧರ್ ಕುಮಾರ್ ಮೀನಾ ಭಾಗವಹಿಸಲಿದ್ದಾರೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ಸುಚೇತಾ ಎಂ ನೆಲವಿಗಿ ತಿಳಿಸಿದ್ದಾರೆ.

### ಸೆ.24ರಂದು ಸಾಮಾಜಿಕ ಅಧಿಕಾರಿತಾ ಶಿಬಿರ: ಉಚಿತವಾಗಿ ಸಾಧನ ಸಲಕರಣೆಗಳ ಸಮರ್ಪಣೆ

» **ಚಿತ್ರದುರ್ಗ**

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ, ವಿಕಲಾಂಗ ವ್ಯಕ್ತಿಗಳ ಸಬಲೀಕರಣ ಇಲಾಖೆ (ದಿವ್ಯಾಂಗಜನ್), ಕೃತಕ ಅಂಗಾಂಗ ತಯಾರಿಕಾ ಕಾರ್ಪೋರೇಷನ್ ಆಫ್ ಇಂಡಿಯಾ (ಅಲಿಂಕೋ), ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಹಯೋಗದೊಂದಿಗೆ ಸಾಮಾಜಿಕ ಅಧಿಕಾರಿತಾ ಶಿಬಿರ-ಕೇಂದ್ರ ಸರ್ಕಾರದ ವಿಶೇಷ ಅಡಿಪ್ ಯೋಜನೆಯಡಿ ವಿಕಲಚೇತನರಿಗೆ ಉಚಿತ ಸಾಧನ ಸಲಕರಣೆಗಳ ಸಮರ್ಪಣೆ ಕಾರ್ಯಕ್ರಮವನ್ನು ಸೆಪ್ಟೆಂಬರ್ 24ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ಪ್ರವಾಸಿ ಮಂದಿರ ಎದುರಿನ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಉದ್ಘಾಟನೆ ನೆರವೇರಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ಘನ ಉಪಸ್ಥಿತಿವಹಿಸುವರು.

# ಬಸವಲಿಂಗ ಶ್ರೀಗಳ ಕಾರ್ಯ ಮಾದರಿ

## ಬರದ ನಾಡಲ್ಲಿ ಅನ್ನ, ಅಕ್ಷರ, ಜ್ಞಾನ ದಾಸೋಹದ ಬೆಳೆ -ನಿಜವಾದ ಕಾಯಕ ಯೋಗಿ -ಮಾಜಿ ಸಚಿವ ಎಚ್.ಆಂಜನೇಯ ಬಣ್ಣನೆ

» **ಮೊಳಕಾಲ್ಮೂರು**

ಸಿದ್ದಯ್ಯನಕೋಟೆ ವಿಜಯ ಮಹಾಂತ ಶಾಖಾ ಮಠದ ಶ್ರೀ ಬಸವಲಿಂಗ ಸ್ವಾಮೀಜಿ ಅವರ ಜನಪರ ಕಾರ್ಯಗಳು ನಾಡಿಗೆ ಮಾದರಿ ಆಗಿವೆ ಎಂದು ಮಾಜಿ ಸಚಿವ ಎಚ್.ಆಂಜನೇಯ ಹೇಳಿದರು.

ಶ್ರೀಗಳು ಶಾಖಾ ಮಠದ ಪೀಠಾಧ್ಯಕ್ಷರಾಗಿ 25 ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ ಮಠದ ಆವರಣದಲ್ಲಿ ಬುಧವಾರ ಆಯೋಜಿಸಿದ್ದ ರಜತ ಮಹೋತ್ಸವ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಉತ್ಸವ ಸಮಿತಿ ಅಧ್ಯಕ್ಷರನ್ನಾಗಿ ನನ್ನನ್ನು ಹಾಗೂ ಗೌರವಾಧ್ಯಕ್ಷರನ್ನಾಗಿ ಶಾಸಕ ಎನ್.ವೈ.ಗೋಪಾಲಕೃಷ್ಣ ಅವರನ್ನು ಆಯ್ಕೆ ಮಾಡುವ ಮೂಲಕ ಬಹುದೊಡ್ಡ ಹೊಣೆಗಾರಿಕೆ ನಮ್ಮ ಹೆಗಲಿಗೆ ಮಠದ ಭಕ್ತರು ವಹಿಸಿದ್ದಾರೆ. ಅದನ್ನು ಸಮರ್ಥವಾಗಿ ನಿಭಾಯಿಸುತ್ತೇವೆ ಎಂದರು.



25 ವರ್ಷಗಳ ಹಿಂದೆ ಇಳಕ□□ನಲ್ಲಿ ಆಯೋಜಿಸಿದ್ದಧಾರ್ಮಿಕಸಮಾರಂಭದಲ್ಲಿ ಅಂದು ಪಾಲ್ಗೊಂಡಿದ್ದ ರಾಮವಿಲಾಸ್ ಪಾಸ್ವಾನ್ ಅವರು, ಬಸವಣ್ಣನ ಹೆಸರು, ಆಶಯ, ತತ್ವ ಪ್ರಚಾರದಲ್ಲಿ ತೊಡಗಿರುವ ಮಠಗಳುಇಲ್ಲಿಯವರೆಗೂತಮ್ಮಮಠಗಳಿಗೆ ದಲಿತ ವರ್ಗದವರನ್ನು ಪೀಠಾಧ್ಯಕ್ಷರನ್ನಾಗಿ ನೇಮಕ ಮಾಡಿಲ್ಲದಿರುವುದು ನೋವು ತರಿಸಿದೆ ಎಂದು ಹೇಳಿದ್ದರು.

ಈ ಮಾತನ್ನು ಗಂಭೀರವಾಗಿ ಸ್ವೀಕರಿಸಿದ ಇಳಕಲ್ ಮಹಾಂತ ಅಪ್ಪಗಳು, ಮೊಳಕಾಲ್ಮೂರು ತಾಲೂಕಿನ ಈ ಶಾಖಾ ಮಠಕ್ಕೆ ಅಸ್ಪೃಶ್ಯ ಜಾತಿಯ ಬಸವಲಿಂಗ ಸ್ವಾಮೀಜಿ ಅವರನ್ನು ಪೀಠಾಧ್ಯಕ್ಷರನ್ನಾಗಿ ಮಾಡುವ ಮೂಲಕ ಬಹುದೊಡ್ಡ ಕ್ರಾಂತಿಗೆ 25 ವರ್ಷದ ಹಿಂದೆಯೇ ಮುನ್ನುಡಿ ಬರೆದರು ಎಂದು ಸ್ಮರಿಸಿದರು.

ಮಹಾಂತ ಅಪ್ಪಗಳ ಆಶಯ, ನಂಬಿಕೆಗೆ ಚ್ಯುತಿ ಬರದ ರೀತಿ ಬರಗಾಲ ಪೀಡಿತ, ಅನಕ್ಷರತೆ ಪ್ರದೇಶದಲ್ಲಿ ಅನ್ನ, ಅಕ್ಷರ, ಜ್ಞಾನ ದಾಸೋಹದ ಬೀಜ ಬಿತ್ತಿ ಸಾಮಾಜಿಕ ಪ್ರಜ್ಞೆಯ ಬೆಳೆ ತೆಗೆಯುವ ಮೂಲಕ ಉತ್ತಮ ನಾಡು ಕಟ್ಟುವ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ಶ್ರೀಗಳು ಬಸವಣ್ಣ, ಅಂಬೇಡ್ಕರ್ ಹಾದಿಯಲ್ಲಿ ಸಾಗುತ್ತಿದ್ದಾರೆ ಎಂದು ಬಣ □□ಸಿದರು.

ಜಮೀನಿನಲ್ಲಿ ಸ್ವತಃ ತಾವೇ ಭೂಮಿ ಹದ ಮಾಡಿ, ಬಿತ್ತನೆ, ಕಳೆ, ಕಟಾವು ಸೇರಿ ಎಲ್ಲ ಕಾರ್ಯ ಕೈಗೊಂಡು, ಅದರಲ್ಲಿ ಬೆಳೆದ ಬೆಳೆಯನ್ನು ಮಠದಲ್ಲಿನ 200 ವಿದ್ಯಾರ್ಥಿಗಳಿಗೆ ತಾವೇ ಅಡುಗೆ ತಯಾರಿಸಿ ಅಮ್ಮನ ಸ್ಥಾನದಲ್ಲಿ ನಿಂತು ಊಟ ಬಡಿಸುವುದು ಹಾಗೂ ಮಠಕ್ಕೆ ಭೇಟಿ ನೀಡುವ ಭಕ್ತರ ಹಸಿವು ನೀಗಿಸುವ ಕೆಲಸ ಮಾಡುತ್ತಿರುವ ಸ್ವಾಮೀಜಿ ಕಾರ್ಯ ಅನುಕರಣ □ಯ ಆಗಿದೆ ಎಂದು ಹೇಳಿದರು.

ಚಿಕ್ಕ ಮಠವೊಂದು ಬರಡು ಪ್ರದೇಶದಲ್ಲಿ ಶೈಕ್ಷಣ ಕ, ಸಾಮಾಜಿಕ ಕಾರ್ಯದಲ್ಲಿ ಮಾಡಿರುವ ಬದಲಾವಣೆ ಕಾರ್ಯಗಳು ನಿಜಕ್ಕೂ ವಿಸ್ಮಯಗೊಳಿಸುತ್ತವೆ. ಕಂದಾಚಾರಣೆ ವಿರುದ್ಧ ಜನ ಜಾಗೃತಿ ಮೂಡಿಸುವ ಮೂಲಕ ಜನರಲ್ಲಿ ವೈಚಾರಿಕ ಜ್ಞಾನ ಬಿತ್ತುವ ಕೆಲಸವನ್ನು ಶ್ರೀಗಳು ನಿರಂತರ ಮಾಡುತ್ತಿದ್ದಾರೆ. ಆದ್ದರಿಂದ ಶ್ರೀಗಳ ಪೀಠರೋಹಣದ ರಜತ ಮಹೋತ್ಸವವನ್ನು ಐದು ದಿನಗಳ ಅರ್ಥಪೂರ್ಣವಾಗಿ 2024ರ ಫೆಬ್ರವರಿ ತಿಂಗಳಲ್ಲಿ ಆಚರಣೆಗೆ ಸಕಲ ಸಿದ್ಧತೆ ಈಗಿನಿಂದಲೇ ಕೈಗೊಳ್ಳಬೇಕು. ನಾಡಿನ ಎಲ್ಲ ಮಠಾಧೀಶರು, ಚಿಂತಕರು, ಸಾಹಿತಿಗಳನ್ನು ಕರೆಯಿಸಬೇಕು. ಕೊನೆಯ ದಿನದ ಸಮಾರಂಭಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿ ವಿವಿಧ ಕ್ಷೇತ್ರದ ಗಣ್ಯರನ್ನು ಕರೆಯಿಸಬೇಕು ಎಂದು ಹೇಳಿದರು.ಬಿ.ಜಿ.ಕೆರೆಯಲ್ಲಿ ಬಸವ ಅಂಬೇಡ್ಕರ್ ಭವನ ಕಾಮಗಾರಿ ಅಪೂರ್ಣವಾಗಿದ್ದು, ಅದನ್ನು ಶೀಘ್ರ ಪೂರ್ಣಗೊಳಿಸಿ, ಮುಖ್ಯಮಂತ್ರಿಗಳಿಂದ ಉದ್ಘಾಟಿಸುವ ಮೂಲಕ ಶ್ರೀಗಳ ಪೀಠಾರೋಹಣ ರಜತಮಹೋತ್ಸವವನ್ನು ಸ್ಮರಣೆಯಗೊಳಿಸಲು ಭಕ್ತರು ಮುಂದಾಗಬೇಕು. ಈ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿ ದೊರೆಯಬೇಕಾಗದ ಸಹಕಾರ ಕೊಡಿಸಲು ನಾನು ಮತ್ತು ಶಾಸಕ ಎನ್. ವೈ.ಗೋಪಾಲಕೃಷ್ಣ ಜತೆಗೂಡಿ ಸಹಕಾರ ನೀಡುತ್ತೇವೆ ಎಂದು ತಿಳಿಸಿದರು.

ಮಠಾಧೀಶರೊಬ್ಬರು ಹೇಗೆ ತನ್ನ ಪ್ರದೇಶದಲ್ಲಿನ ಜನರನ್ನು ವೈಚಾರಿಕತೆಯತ್ತ ಕೊಂಡೊಯ್ಯಬಹುದು. ಆರ್ಥಿಕ ಸಂಕಷ್ಟದಲ್ಲೂ ಶಿಕ್ಷಣ ಸಂಸ್ಥೆ ಕಟ್ಟಿ ಬಡ ಮಕ್ಕಳನ್ನು ವಿದ್ಯಾವಂತರನ್ನಾಗಿಸಬಹುದು ಎಂಬುದಕ್ಕೆ ಬಸವಲಿಂಗ ಸ್ವಾಮೀಜಿಗಳ ಕಾರ್ಯಗಳು ನಮ್ಮ ಮುಂದೆ ಇವೆ. ಅವರ ಆದರ್ಶಗಳನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕು. ಅವರ ಆಶಯದಂತೆ ಶಿಕ್ಷಣಕ್ಕೆ ಈ ಪ್ರದೇಶದ ಜನ ಇನ್ನೂ ಹೆಚ್ಚು ಒತ್ತು ನೀಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪೂಜ್ಯಶ್ರೀ ಬಸವಲಿಂಗ ಮಹಾಸ್ವಾಮಿಗಳು ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಶಾಖಾಮಠ ಸಿದ್ದಯ್ಯನಕೋಟೆ, ಪೂಜ್ಯಶ್ರೀ ಮಹಾಂತ ಸ್ವಾಮೀಜಿ ಮುದಗಲ್ ಕಲ್ಯಾಣಶ್ರಮ ತಿಮ್ಮಾಪುರ, ಶ್ರೀಮಠದ ಕಾರ್ಯದರ್ಶಿ ಪಿ.ಆರ್.ಕಾಂತರಾಜ್, ಪಟೇಲ್ ಜಿ.ಪಾಪ ನಾಯಕ್, ಅಂಬೇಡ್ಕರ್ ವಿದ್ಯಾರ್ಥಿ ಪರಿಷತ್ ಅಧ್ಯಕ್ಷ ಬಿ.ಪಿ. ತಿಪ್ಪೇಸ್ವಾಮಿ, ಕೆ.ಚಂದ್ರಪ್ಪ ಬಿ.ಎಸ್.ವೀರಭದ್ರಪ್ಪ, ಕೆ.ಬಸಣ್ಣ, ಜಿ.ಪಿ.ಸುರೇಶ್, ಲಕ್ಷ್ಮಣ, ನೀಲಕಂಠ, ತುಳಸಿ, ರುದ್ರಮ್ಮ, ಮಹಾದೇವಿ, ಜಯಲಕ್ಷ್ಮಿ, ಶ್ರೀವಿಜಯ ಮಹಾಂತೇಶ್ವರ ಮಹಿಳಾ ಮಂಡಳಿ ಅಕ್ಕನ ಬಳಗ ಸದ್ಭಕ್ತರು ಭಾಗವಹಿಸಿದ್ದರು.

# ಬೆಂಗಳೂರಿಂದ ಶಿರಡಿಯವರೆಗೂ ಬೈಕ್ ರೈಡ್

» **ಚಿತ್ರದುರ್ಗ**

ಬೆಂಗಳೂರು ನಗರದ ಪೀಣ್ಯದಿಂದ ಶಿರಡಿಯವರೆಗೂ ರೋಟರಿ ಸಂಸ್ಥೆಯ ಕೆಲ ಪದಾಧಿಕಾರಿಗಳು ಬೈಕ್ ಮೂಲಕ ಪ್ರವಾಸವನ್ನು ಮಾಡುವುದರ ಮೂಲಕ ಮಾನವನಿಗೆ ದೈಹಿಕ ಸಾಮರ್ಥ್ಯ ಎಷ್ಟರ ಮಟ್ಟಿಗೆ ಅವಶ್ಯಕತೆಯೋ ಅಷ್ಟೇ ಪ್ರಾಮುಖ್ಯತೆಯನ್ನು ಮಾನಸಿಕ ಆರೋಗ್ಯಕ್ಕೂ ನೀಡಬೇಕೆಂಬ ಸಂದೇಶವನ್ನು ಸಾರುತ್ತಾ ಹೊರಟ್ಟಿದ್ದಾರೆ.



ಬೆಳಿಗ್ಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ವೃತ್ತದಲ್ಲಿ ಬೆಂಗಳೂರಿನಿಂದ ಬೈಕ್ ಮೂಲಕ ಆಗಮಿಸಿದ ರೋಟರಿ ಕ್ಲಬ್‌ನ ಪದಾಧಿಕಾರಿಗಳನ್ನು ಚಿತ್ರದುರ್ಗ ರೋಟರಿ ಕ್ಲಬ್, ರೋಟರಿ ಕ್ಲಬ್ ಚಿತ್ರದುರ್ಗ ಪೋರ್ಟ್ ಹಾಗೂ ರೋಟರಿ ಕ್ಲಬ್ ಚಿನ್ಮೂಲಾದ್ರಿ ಸಂಸ್ಥೆಯ ಪದಾಧಿಕಾರಿಗಳು ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಂಡದ ಮುಖ್ಯಸ್ಥರಾದ ರಾಜೇಶ್, ಮಾನಸಿಕ ಆರೋಗ್ಯ ಎಲ್ಲಾ ವಯಸ್ಸಿನವರಿಗೂ ಅಗತ್ಯವಾಗಿದೆ.

ಆದರೆ ಇತ್ತೀಷಿನ ದಿನಮಾನದಲ್ಲಿ ದೈಹಿಕ ಆರೋಗ್ಯಕ್ಕೆ ಹೆಚ್ಚಿನ ಮಾನ್ಯತೆಯನ್ನು ನೀಡುತ್ತಾರೆ ಆದರೆ ಮಾನಸಿಕ ಆರೋಗ್ಯವನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ. ಇದರ ಬಗ್ಗೆ ಅರಿವನ್ನು ನೀಡುವುದಕ್ಕ ಈ ಪ್ರವಾಸವನ್ನು ಹಮ್ಮಿಕೊಳ್ಳಲಾಗಿದೆ. ಈ ವರ್ಷ ರೋಟರಿನ ಮುಖ್ಯ ಉದ್ದೇಶ ಮಾನಸಿಕ ಆರೋಗ್ಯದ ಸ್ಥಿರತೆ ಎಂಬುದಾಗಿದೆ. ಇಂದು ಬೆಳಿಗ್ಗೆಯಿಂದ ಪ್ರವಾಸವನ್ನು ಪ್ರಾರಂಭ ಮಾಡಿದ್ದು ಇದು ಈ ತಿಂಗಳ 30ಕ್ಕೆ ಅಂತ್ಯವಾಗಲಿದೆ. ಶಿರಡಿಯನ್ನು ಸೆ.22ರಂದು ತಲುಪಿಲಿದ್ದೇವೆ. ದಿನಕ್ಕೆ 300 ರಿಂದ 350 ಕಿ.ಮೀ. ದೂರವನ್ನು ಕ್ರಮಿಸಲಿದ್ದೇವೆ ಒಟ್ಟು 12 ದಿನದ ಪ್ರವಾಸ ಇದಾಗಿದೆ ಎಂದರು.

ದಿನ ಒಂದಕ್ಕೆ 4 ಕಡೆಗಳಲ್ಲಿ ಸಭೆಯನ್ನು ಮಾಡುವುದರ ಮೂಲಕ ಮಾನಸಿಕ ಆರೋಗ್ಯದ ಬಗ್ಗೆ ರೋಟರಿ ಕ್ಲಬ್ ಪದಾಧಿಕಾರಿಗಳು ಮತ್ತು ಇತರರಿಗೆ ಅರಿವನ್ನು ಮೂಡಿಸಲಾಗುವುದು. ಈ ತಂಡದಲ್ಲಿ 8 ಜನರಿದ್ದು, ಡಿ.3192 ಯಿಂದ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಮಕ್ಕಳಲ್ಲಿ, ಯುವ ಜನಾಂಗ, ಹಿರಿಯ ನಾಗರೀಕರಿಗೆ ಈ ಕಾರ್ಯಕ್ರಮವನ್ನು ತಿಳಿಸಲಾಗುವುದು. ಮನಸ್ಥಿತಿಯವರನ್ನು ನೋಡಿಕೊಳ್ಳುವವರನ್ನು ನೋಡಿಕೊಳ್ಳುವವರ ಮನಸ್ಥಿತಿಯ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.

ಈ ತಂಡದಲ್ಲಿ ಅಧ್ಯಕ್ಷ ರಾಜೇಶ್, ಕಾರ್ಯದರ್ಶಿ ವಿನೋದ್ ಆಗ್ರವಾಲ್, ಜಂಟಿ ಕಾರ್ಯದರ್ಶಿ ನವೀನ್, ಶ್ರೀಕಾಂತ್, ಶ್ರೀನಿವಾಸ್ ರಾಜು,ಜಯಪ್ರಕಾಶ್, ಇಕ್ರಾಂ ಮಹಮದ್ ಖಾನ್ ಮತ್ತು ಮೋಹನ್ ಇದ್ದಾರೆ.

ರೋಟರಿ ಕ್ಲಬ್ ಅಧ್ಯಕ್ಷ ಕನಕರಾಜು, ಎಸ್.ವೀರೇಶ್, ಗಿರೀಶ್, ವೀರಭದ್ರಸ್ವಾಮಿ, ಕುರುಬರ ಹಳ್ಳಿ ಶಿವಣ್ಣ, ಸೂರ್ಯ ನಾರಾಯಣ, ಶಶಿಧರ್, ಗೀರೀಶ್, ಮೋಹನ್ ಬಿ.ಎಸ್. ಶಂಕ್ರರಪ್ಪ, ವೀರಣ್ಣ ಇದ್ದರು.



**ರಾಜ್ಯ ವಿದ್ಯಾರ್ಥಿ ಕಾಂಗ್ರೆಸ್ ಅಧ್ಯಕ್ಷ ( NSUI) ಕೀರ್ತಿ ನೇತೃತ್ವದ ಪದಾಧಿಕಾರಿಗಳ ತಂಡ ದೆಹಲಿಯ ಕರ್ನಾಟಕ ಭವನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ರಾಜ್ಯದ ಕಾಲೇಜುಗಳಲ್ಲಿ ವಿದ್ಯಾರ್ಥಿ ಸಂಘಗಳ ಚುನಾವಣೆಗೆ ಅವಕಾಶ ಒದಗಿಸಿಕೊಡುವಂತೆ ವಿನಂತಿಸಿತು. ಸೆ.22 ರಂದು ದೆಹಲಿ ವಿಶ್ವ ವಿದ್ಯಾಲಯ ವಿದ್ಯಾರ್ಥಿ ಸಂಘಕ್ಕೆ ಚುನಾವಣೆ ನಡೆಯಲಿದೆ. ಈ ಚುನಾವಣೆಯಲ್ಲಿ ಸ್ಪರ್ಧಿಸಿರುವ NSUI ಅಭ್ಯರ್ಥಿಗಳ ಪರವಾಗಿ ರಾಜ್ಯದಿಂದ ಬಂದಿರುವ 50 ಮಂದಿ ಓಖಗಖ ಕಾರ್ಯಕರ್ತರು ಕಳೆದ 15 ದಿನಗಳಿಂದ ಪ್ರಚಾರ ನಡೆಸುತ್ತಿರುವುದಾಗಿ ರಾಜ್ಯಾಧ್ಯಕ್ಷ ಕೀರ್ತಿ ಅವರು ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದರು. ದೆಹಲಿ ವಿವಿ ವಿದ್ಯಾರ್ಥಿ ಸಂಘದ ಚುನಾವಣೆಯಲ್ಲಿ ಯಶಸ್ಸು ಸಿಗಲಿ ಎಂದು ಮುಖ್ಯಮಂತ್ರಿಗಳು ಕಾರ್ಯಕರ್ತರಿಗೆ ಹಾರೈಸಿದರು.**

### ಚಳ್ಳಕೆರೆ ನಗರಸಭೆ: ಬಿಡಾಡಿ ದನಗಳ ಮಾಲೀಕರಿಗೆ ಸೂಚನೆ

» **ಚಿತ್ರದುರ್ಗ**

ಚಳ್ಳಕೆರೆ ನಗರದಲ್ಲಿ ಬಿಡಾಡಿ ದನಗಳ ಉಪಟಳ ಹೆಚ್ಚಾಗಿದ್ದು, ರಸ್ತೆಯಲ್ಲಿ ಗುಂಪು ಗುಂಪಾಗಿ ಓಡಾಡುತ್ತಾ, ರಸ್ತೆಯಲ್ಲಿ ಓಡಾಡುವ ನಗರದ ನಾಗರೀಕರಿಗೆ, ಮಕ್ಕಳಿಗೆ, ಮಹಿಳೆಯರಿಗೆ, ವೃದ್ದರಿಗೆ ಹಾಗೂ ವಾಹನ ಸವಾರರಿಗೆ ತೊಂದರೆ ಉಂಟು ಮಾಡುತ್ತಿರುತ್ತವೆ. ದನಗಳು ಗುದ್ದಾಡುತ್ತಾ ಜನಗಳ ಮತ್ತು ರಸ್ತೆಯಲ್ಲಿ ಓಡಾಡುವ ವಾಹನಗಳ ಮೇಲೆರಗುವುದರಿಂದ ಪ್ರಾಣಾಪಾಯವಾಗುವ ಸಂಭವವಿರುತ್ತದೆ. ಸಾರ್ವಜನಿಕರಿಂದ ಈ ಬಗ್ಗೆ ನಗರಸಭೆ ದೂರುಗಳು ಬಂದಿರುತ್ತವೆ. ಆದ್ದರಿಂದ ದನಗಳ ಮಾಲೀಕರು ತಮ್ಮ ದನಗಳನ್ನು ರಸ್ತೆಗೆ ಬಿಡದಂತೆ ತಮ್ಮ ಜಾಗದಲ್ಲಿ ಪಾಲನೆ ಮಾಡಲು ತಿಳಿಸಿದೆ. ಪ್ರಯುಕ್ತ ತಮಗೆ ಸಂಬಂಧಿಸಿದ ದನಗಳಿಗೆ ತಾವೇ ಜವಾಬ್ದಾರರಾಗಿದ್ದು, ಈ ಪ್ರಕಟಣೆಯ ಒಂದು ವಾರದ ನಂತರ ಬಿಡಾಡಿ ದನಗಳನ್ನು ಹಿಡಿದು ಸಾಗಿಸಲಾಗುವುದು ಎಂದು ಚಳ್ಳಕೆರೆ ನಗರಸಭೆ ಪೌರಯುಕ್ತ ಸಿ.ಚಂದ್ರಪ್ಪ ತಿಳಿಸಿದ್ದಾರೆ.

### ಅವಧಿ ವಿಸ್ತರಣೆ

**ದಾವಣಗೆರೆ:** ಪ್ರಸಕ್ತ ಸಾಲಿನ ಅಲ್ಪಸಂಖ್ಯಾತರ ನಿರ್ದೇಶನಾಲಯದ ವತಿಯಿಂದ ಬೆಂಗಳೂರಿನ ಹಜ್ ಭವನದಲ್ಲಿ ಐಎಎಸ್ ಮತ್ತು ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿ ನೀಡಲು ಅಲ್ಪಸಂಖ್ಯಾತರ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು ಅರ್ಜಿ ಸಲ್ಲಿಸುವ ದಿನಾಂಕವನ್ನು ಸೆಪ್ಟೆಂಬರ್ 25 ರವರೆಗೆ ವಿಸ್ತರಿಸಲಾಗಿದೆ ಎಂದು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ತಿಳಿಸಿದ್ದಾರೆ

## ಪ್ರಮುಖ ಸುದ್ದಿ

### ಖಾಸಗಿ ಅನುದಾನ ರಹಿತ ಶಾಲಾ ಆಡಳಿತಮಂಡಳಿಯಿಂದ ರಾಜ್ಯಮಟ್ಟದ ಶೈಕ್ಷಣಿಕ ಕಾರ್ಯಾಗಾರ

# ಶಿಕ್ಷಣ ಸಚಿವ ಮಧುಬಂಗಾರಪ್ಪ ಉದ್ಘಾಟನೆ

» **ಚಳ್ಳಕೆರೆ**

ಇದೇ ಪ್ರಥಮ ಬಾರಿಗೆ ಚಳ್ಳಕೆರೆ ನಗರದಲ್ಲಿ ರಾಜ್ಯಮಟ್ಟದ ಶೈಕ್ಷಣಿಕ ಕಾರ್ಯಗಾರ, ಶಿಕ್ಷಕರ ದಿನಾಚರಣೆ ಹಾಗೂ ಉತ್ತಮ ಶಿಕ್ಷಕರಿಗೆ ಪ್ರಶಸ್ತಿ ವಿತರಣಾ ಸಮಾರಂಭವನ್ನು ಸೆ.27ರ ಬುಧವಾರ ನಗರದ ಶ್ರೀಗುರುರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಬೆಳಗ್ಗೆ 10.30ಕ್ಕೆ ಸಿರಿಗೆರೆ ಪೂಜ್ಯಶ್ರೀ ಡಾ.ಶಿವಮೂರ್ತಿ ಶಿವಚಾರ್ಯ ಸ್ವಾಮಿಗಳ ದಿವ್ಯಸಾನಿಧ್ಯದಲ್ಲಿ ನಡೆಯಲಿದ್ದು, ಕಾರ್ಯಕ್ರಮದ ಉದ್ಘಾಟನೆಯನ್ನು ಶಿಕ್ಷಣ ಸಚಿವ ಮಧುಬಂಗಾರಪ್ಪ ನೆರವೇರಿಸಲಿದ್ದು, ಅಧ್ಯಕ್ಷತೆಯನ್ನು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ವಹಿಸುವರು.

ತಾಲ್ಲೂಕು ಖಾಸಗಿ ಅನುದಾನ ರಹಿತ ಶಾಲಾ ಆಡಳಿತ ಮಂಡಳಿ ಟ್ರಸ್ಟ್ ವತಿಯಿಂದ ಈ ಕಾರ್ಯಕ್ರಮ ಹಮ್ಮಿಕೊಂಡಿದೆ



ಎಂದು ಅಧ್ಯಕ್ಷ ಯಾದಲಗಟ್ಟೆ ಜಗನ್ನಾಥ ತಿಳಿಸಿದ್ದು, ರಾಜ್ಯಮಟ್ಟದ ಶೈಕ್ಷಣಿಕ ಕಾರ್ಯಗಾರವನ್ನು ಹಮ್ಮಿಕೊಳ್ಳುವ ಮೂಲಕ ಖಾಸಗಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಸ್ಥಿತಿಗತಿಗಳ ಬಗ್ಗೆ ಚರ್ಚೆ ನಡೆಸಲಾಗುವುದು ಎಂದರು.

ಮುಖ್ಯ ಅತಿಥಿಗಳಾಗಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಶಾಸಕರಾದ ಎನ್. ವೈ.ಗೋಪಾಲಕೃಷ್ಣ, ಬಿ.ಜಿ. ಗೋವಿಂದಪ್ಪ, ಎಂ.ಚಂದ್ರಪ್ಪ,ಕೆ.ಸಿ.ವೀರೇಂದ್ರ, ವಿಧಾ ನಪರಿಷತ್ ಸದಸ್ಯ ಕೆ.ಎಸ್.ನವೀನ್, ವೈ.ಎ .ನಾರಾಯಣಸ್ವಾಮಿ, ಕ್ಯಾಮ್ಸ್ ಸಂಘಟನೆ ಪ್ರಧಾನ ಕಾರ್ಯದರ್ಶಿ ಡಿ.ಶಶಿಕುಮಾರ್, ಡಿಡಿಪಿಐ ರವಿಶಂಕರರೆಡ್ಡಿ, ಬಿಇಒ ಕೆ.ಎಸ್.ಸುರೇಶ್ ಕಾರ್ಯಕ್ರಮದಲ್ಲಿ ಭಾಗವಹಿಸುವರು.



ಉತ್ತಮ ಶಿಕ್ಷಕ ಪ್ರಶಸ್ತಿಯನ್ನು ನೀಡಲು ನಿರ್ಧರಿಸಲಾಗಿದ್ದು ಶಿಕ್ಷಣಭೀಷ್ಮವಾರಿಯರ್ ಸಂಸ್ಥಾಪಕ ದಿ.ಟಿ.ಲೋಕನಾಥರವರಿಗೆ ಮರೋತ್ತರವಾಗಿ ನೀಡಲಾಗುವುದು. ಮಾಕಂಸ್ ಸಂಸ್ಥಾಪಕ ಕೆ.ಎಂ. ಜಯಕುಮಾರ್‌ಗೆ ವೈದ್ಯಶ್ರೀಪ್ರಶಸ್ತಿ, ವಿದ್ಯಾವಿಕಾಸ್ ಎಜುಕೇಷನ್ ಸೊಸೈಟಿ ಸಂಸ್ಥಾಪಕ ಕೆ.ಎಂ. ಶಿವಸ್ವಾಮಿಗೆ ಸಾಹಿತ್ಯಶ್ರೀ ಪ್ರಶಸ್ತಿ, ವಿದ್ಯಾಭಾರತಿ ಸಂಸ್ಥಾಪಕ ಕೆ.ಪಿ.ನಾಗಭೂಷಣ್‌ಗೆ ಶಿಕ್ಷಣಶ್ರೀ ಪ್ರಶಸ್ತಿ, ಮೈಲನಹಳ್ಳಿ ಚಂದ್ರೋದಯ ಸಂಸ್ಥೆಯ ಸಂಸ್ಥಾಪಕ ಮೈಲನಹಳ್ಳಿ ಚಂದ್ರಣ್ಣಗೆ ಸಹಕಾರಶ್ರೀ ಪ್ರಶಸ್ತಿ ನೀಡಲಾಗುವುದು, ಬಸವೇಶ್ವರ ವಿದ್ಯಾಸಂಸ್ಥೆಯ ಮಾಜಿ ಅಧ್ಯಕ್ಷ ಎಚ್. ಗಂಗಣ್ಣ, ಸಹ್ಯಾದ್ರಿ ವಿದ್ಯಾಸಂಸ್ಥೆಯ ಎಚ್.ನಾಗರೆಡ್ಡಿಯವರಿಗೆ ವಿಶೇಷ ಪ್ರಶಸ್ತಿ ನೀಡಲಾಗುವುದು ಎಂದು ತಿಳಿಸಿದ್ದಾರೆ.

ರಾಜ್ಯದ ವಿವಿಧ ಖಾಸಗಿ ವಿದ್ಯಾಸಂಸ್ಥೆಗಳ ಆಡಳಿತಮಂಡಳಿಯವರು ಕಾರ್ಯಕ್ರಮದಲ್ಲಿ ತಪ್ಪದೆ ಭಾಗವಹಿಸ ಬೇಕೆಂದು ಸಂಚಾಲಕರಾದ ರಾಜಶೇಖರ ಗುಪ್ತ, ಆರ್.ಶ್ರೀನಿವಾಸ್‌ಚಾರ್, ಷೇಕ್‌ಪೀರ್ ಮನವಿ ಮಾಡಿದ್ದಾರೆ.

## ಫಾಸ್ಟ್ ನ್ಯೂಸ್

### ಸೆ.21ರಂದು ಬಾಲ್ಯ ವಿವಾಹ ನಿಷೇದಾಧಿಕಾರಿಗಳಿಗೆ ಕಾರ್ಯಾಗಾರ

» **ಚಿತ್ರದುರ್ಗ**

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಹಿರಿಯೂರು ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ "ಪೋಕ್ಸೊ ಕಾಯ್ದೆ ಮತ್ತು ಬಾಲ್ಯ ವಿವಾಹ ನಿಷೇಧ ಕಾಯ್ದೆ" ಕುರಿತು ಬಾಲ್ಯ ವಿವಾಹ ನಿಷೇದಾಧಿಕಾರಿಳಿಗೆ ಒಂದು ದಿನದ ಕಾರ್ಯಗಾರವನ್ನು ಸೆಪ್ಟೆಂಬರ್ 21ರಂದು ಬೆಳಿಗ್ಗೆ 9.30 ಗಂಟೆಗೆ ಹಿರಿಯೂರು ನಗರದ ಹುಳಿಯಾರ್ ರಸ್ತೆಯ ವಾಲ್ಮೀಕಿ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಎಸ್.ರೇಖಾ ಕಾರ್ಯಕ್ರಮ ಉದ್ಘಾಟಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ತಾಲ್ಲೂಕು ಕಾನೂನು ಸೇವಾ ಸಮಿತಿ ಅಧ್ಯಕ್ಷ ಮೊಹಮ್ಮದ್ ಮೊಯಿನುದ್ದಿನ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಜಿ.ಆರ್.ಜೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಜೆ. ಸೋಮಶೇಖರ್, ಪೊಲೀಸ್ ಅಧೀಕ್ಷಕ ಧರ್ಮೇಂದರ್ ಕುಮಾರ್ ಮೀನಾ, ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಧೀಶರು ಹಾಗೂ ತಾಲ್ಲೂಕು ಕಾನೂನು ಸೇವೆಗಳ ಸಮಿತಿ ಸದಸ್ಯ ಕಾರ್ಯದರ್ಶಿ ಶಿಲ್ಪ ತಿಮ್ಮಾಪುರ, ಅಪರ ಸಿವಿಲ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಧೀಶ ಹೆಚ್.ಡಿ. ಶ್ರೀಧರ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು ಡಾ. ಆರ್. ಪ್ರಭಾಕರ, ಹಿರಿಯೂರು ವಕೀಲರ ಸಂಘದ ಅಧ್ಯಕ್ಷ ರಂಗೇನಹಳ್ಳಿ ರಾಮಚಂದ್ರಪ್ಪ ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

### ಸೆ. 24, 25 ರಂದು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

» **ದಾವಣಗೆರೆ**

ಜಿಲ್ಲಾಢಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದೊಂದಿಗೆ 2023-24ನೇ ಸಾಲಿನ ದಾವಣಗೆರೆ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆಪ್ಟೆಂಬರ್ 24 ಮತ್ತು 25 ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಸೆಪ್ಟೆಂಬರ್ 24ರಂದು ಅಥ್ಲೆಟಿಕ್ಸ್, ಬ್ಯಾಸ್ಕೆಟ್‌ಬಾಲ್, ವಾಲಿಬಾಲ್, ಕಬಡ್ಡಿ, ಖೋ-ಖೋ, ಥ್ರೋಬಾಲ್, ಬಾಲ್‌ಬ್ಯಾಡ್ಮಿಂಟನ್, ನೆಟ್‌ಬಾಲ್, ಟೇಬಲ್ ಟೆನ್ನೀಸ್, ಶಟಲ್ ಬ್ಯಾಡ್ಮಿಂಟನ್, ಯೋಗ ಹಾಗೂ ಸೆಪ್ಟೆಂಬರ್ 25 ರಂದು ಹಾಕಿ, ಕುಸ್ತಿ, ಹ್ಯಾಂಡ್‌ಬಾಲ್, ಪುಟ್‌ಬಾಲ್, ಈಜು, ಟೆನ್ನೀಸ್ ಕ್ರೀಡೆಗಳನ್ನು ಸಂಘಟಿಸಲಾಗಿದೆ.

ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದವರು ಹಾಗೂ ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದವರು ಮಾತ್ರ ಕ್ರೀಡಾ ಕೂಟದಲ್ಲಿ ಭಾಗವಹಿಸಲು ಅರ್ಹರಾಗಿದ್ದು, ಭಾಗವಹಿಸಲಿಚ್ಚಿಸುವವರು ಸೆಪ್ಟೆಂಬರ್ 24 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ತಮ್ಮ ಆಧಾರ್ ಕಾರ್ಡ್ ಮತ್ತು ಬ್ಯಾಂಕ್ ಪಾಸ್ ಪುಸ್ತಕದ ನಕಲು ಪ್ರತಿಯೊಂದಿಗೆ ಕಡ್ಡಾಯವಾಗಿ ಸಂಘಟಕರಲ್ಲಿ ವರದಿ ಮಾಡಿಕೊಳ್ಳಬೇಕು.

### ಗಣೇಶ ಪ್ರತಿಷ್ಟಾಪನೆಯಲ್ಲಿ ರಕ್ತದಾನ ಶಿಬಿರ ಉದ್ಘಾಟಿಸಿದ ಮಾದಾರ ಚನ್ನಯ್ಯಸ್ವಾಮೀಜಿ

» **ಚಿತ್ರದುರ್ಗ**

ರಕ್ತದಾನ ಮಾಡುವುದರಿಂದ ಮತ್ತೊಂದು ಅಮೂಲ್ಯವಾದ ಜೀವ ಉಳಿಸಬಹುದು ಎಂದು ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯಸ್ವಾಮೀಜಿ ಹೇಳಿದರು.ನಗರದ ಐ.ಯು.ಡಿ.ಪಿ. ಲೇಔಟ್ ಆದಿಜಾಂಬವ ಬಡಾವಣೆಯಲ್ಲಿ ಮೋದಕಪ್ರಿಯ ಗೆಳೆಯರ ಬಳಗದ ಮೊದಲನೆ ವರ್ಷದ ಗಣೇಶ ಪ್ರತಿಷ್ಠಾಪನೆ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದರು.ರಕ್ತದಾನ ಮಾಡುವುದರಿಂದ ನಿಶ್ಯಕ್ತಿಯಾಗುತ್ತದೆನ್ನುವ ತಪ್ಪು ಕಲ್ಪನೆ ಯಾರಲ್ಲಿಯೂ ಮೂಡಬಾರದು. ಆರೋಗ್ಯವಂತರು ರಕ್ತದಾನ ಮಾಡುವುದರಿಂದ ಹೊಸ ರಕ್ತಕಣಗಳು ಉತ್ಪತ್ತಿಯಾಗುತ್ತದೆಯಲ್ಲದೆ ಸಾವು-ಬದುಕಿನ ನಡುವೆ ಹೋರಾಟ ನಡೆಸುತ್ತಿರುವವರ ಪ್ರಾಣ ಉಳಿಸಿದಂತಾಗುತ್ತದೆ ಎಂದು ಹೇಳಿದ ಸ್ವಾಮೀಜಿ ಯುವ ಜನಾಂಗದ ದುಶ್ಚಟಗಳಿಂದ ದೂರವಿರಬೇಕು. ಗಣೇಶ ಹಬ್ಬ ಎಂದರೆ ಬರಿ ಕುಣಿದು ಕುಪ್ಪಳಿಸುವುದಲ್ಲ. ಸಮಾಜಕ್ಕೆ ಅನುಕೂಲವಾಗುವ ಇಂತಹ ಪರೋಪಕಾರದ ಕೆಲಸಗಳಲ್ಲಿ ತೊಡಗಬೇಕೆಂದು ವಿನಂತಿಸಿದರು.ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಮಾತನಾಡಿ ಮೋದಕಪ್ರಿಯ ಗೆಳೆಯರ ಬಳಗದವರು ಮೊದಲನೆ ವರ್ಷದ ಗಣೇಶ ಪ್ರತಿಷ್ಠಾಪನೆ ವೇಳೆಯಲ್ಲಿ ರಕ್ತದಾನ ಶಿಬಿರ ಏರ್ಪಡಿಸಿ ಮಾನವೀಯತೆ ಮೆರೆದಿರುವುದು ನಿಜಕ್ಕೂ ಸಂತೋಷದ ಸಂಗತಿ. ಪ್ರತಿಯೊಬ್ಬರು ಸ್ವಯಂಪ್ರೇರಿತವಾಗಿ ರಕ್ತದಾನಕ್ಕೆ ಮುಂದಾಗಬೇಕು ಎಂದರು.

# ಕಟ್ಟಡ ಕಾರ್ಮಿಕರು ಆರ್ಥಿಕ ಸಬಲರಾಗಬೇಕು


» **ದಾವಣಗೆರೆ**



ಕಾರ್ಮಿಕರಿಗೆ ಸೌಲಭ್ಯಗಳನ್ನು ಒದಗಿಸುವುದರ ಜೊತೆಗೆ ಅವರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ನಿಟ್ಟಿನಲ್ಲಿ ದಾವಣಗೆರೆ ಜಿಲ್ಲಾ ಕಟ್ಟಡ ಕಟ್ಟುವ ಕಲ್ಲು ಒಡೆಯುವ ಮತ್ತು ಕ್ವಾರಿ ಕಾರ್ಮಿಕರ ಸಂಘವು ಶ್ರಮಿಸುತ್ತಿರುವುದು ಅತ್ಯಂತ ಶ್ಲಾಘನೀಯವಾದುದು. ಸಹಕಾರ ಸಂಘದ ಸೌಲಭ್ಯಗಳನ್ನು ಬಳಸಿಕೊಂಡು ಕಟ್ಟಡ ಕಾರ್ಮಿಕರು ಆರ್ಥಿಕವಾಗಿ ಸಬಲರಾಗಬೇಕು ಎಂದು ಎಐಟಿಯುಸಿ ದಾವಣಗೆರೆ ಜಿಲ್ಲಾಧ್ಯಕ್ಷ ಕೆ.ರಾಘವೇಂದ್ರ ನಾಯರಿ ಕರೆ ನೀಡಿದರು.

ದಾವಣಗೆರೆಯ ಅಶೋಕ ರಸ್ತೆಯಲ್ಲಿರುವ ಕಾಮ್ರೇಡ್ ಪಂಪಾಪತಿ ಭವನದಲ್ಲಿ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ವಿವಿಧೋದ್ದೇಶ ಸಹಕಾರ ಸಂಘದ 8 ನೇ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಮಾತನಾಡುತ್ತಾ, ಇಂದಿನ ದಿನಮಾನದಲ್ಲಿ ಹಣಕಾಸು ಸಂಸ್ಥೆಯನ್ನು ನಡೆಸುವುದು ತುಂಬಾ ಕಷ್ಟದಾಯಕವಾಗಿರುವಾಗ ಕಾರ್ಮಿಕ ಸಂಘವೊಂದು ತನ್ನ ಸದಸ್ಯರ ಶ್ರೇಯೋಭಿವೃದ್ಧಿಗಾಗಿ ಕಳೆದ 8 ವರ್ಷಗಳಿಂದ ನಿರಂತರವಾಗಿ ಸಹಕಾರ ಸಂಘವನ್ನು ಮುನ್ನೆಡೆಸಿಕೊಂಡು ಬರುತ್ತಿರುವುದು ಸಂತೋಷದ ವಿಷಯ ಎಂದರು.

ಕಾರ್ಮಿಕರು ತಮ್ಮ ಕಷ್ಟಾರ್ಜಿತದ ಉಳಿತಾಯದ ಹಣವನ್ನು ಈ ಸಹಕಾರ ಸಂಘದಲ್ಲಿ ಠೇವಣಿ ಇಡುವುದರ ಮೂಲಕ, ದಿನವಹಿ ಪಿಗ್ಮಿ ಕಟ್ಟುವುದರ ಮೂಲಕ ಹೆಚ್ಚಿನ ವ್ಯವಹಾರವನ್ನು ಮಾಡಬೇಕು. ಜೊತೆಗೆ ತಮ್ಮ ಕಷ್ಟ ಕಾಲದಲ್ಲಿ ಸಹಕಾರ ಸಂಘದಿಂದ ಸಾಲವನ್ನು ಪಡೆದು ಕ್ಲಪ್ತ ಸಮಯದಲ್ಲಿ ಅದರ ಮರುಪಾವತಿ ಮಾಡಬೇಕು. ಹಾಗಾದಲ್ಲಿ ಮಾತ್ರ ಸಹಕಾರ ಸಂಘಗಳು ಉಳಿಯಲು ಸಾಧ್ಯವೆಂದು ತಿಳಿಸಿದರು. ವಾರ್ಷಿಕ ಮಹಾ ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಸಹಕಾರ ಸಂಘದ ಅಧ್ಯಕ್ಷ ಹೆಚ್.ಜಿ.ಉಮೇಶ್ ಅವರಗೆರೆ ಮಾತನಾಡಿ, ಕಾರ್ಮಿಕರಿಗಾಗಿ ಈ ಸಹಕಾರ ಸಂಘವನ್ನು ಸ್ಥಾಪಿಸಿದ್ದೇವೆ. ಸಹಕಾರ ಸಂಘ ಸ್ಥಾಪನೆಯಾಗಿ 8 ವರ್ಷದ ಬಳಿಕ 2022-23ರ ಸಾಲಿನಲ್ಲಿ ಲಾಭ ದಾಖಲಿಸುತ್ತಿದೆ. ಮುಂದಿನ ದಿನಗಳಲ್ಲಿ ಸಹಕಾರ ಸಂಘವನ್ನು ಇನ್ನಷ್ಟು ಅಭಿವೃದ್ಧಿ ಮಾಡಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಹಿರಿಯ ಕಾರ್ಮಿಕ ಮುಖಂಡರಾದ ಆನಂದರಾಜ್, ಮೊಹಮದ್ ಭಾಷಾ, ಗುಡಿಹಳ್ಳಿ ಹಾಲೇಶ್, ಸಹಕಾರ ಸಂಘದ ಉಪಾಧ್ಯಕ್ಷ ಪಿ.ಕೆ.ಲಿಂಗರಾಜ್, ನಿರ್ದೇಶಕರುಗಳಾದ ವಿ.ಲಕ್ಷ್ಮಣ್, ಟಿ.ಭೀಮಾರೆಡ್ಡಿ, ಡಿ.ಷಣ್ಮುಗಂ, ಜಿ.ಆರ್.ನಾಗರಾಜ್, ಸೈಯದ್ ಗೌಸ್‌ಪೀರ್, ಶಿವಕುಮಾರ್ ಡಿ.ಶೆಟ್ಟರ್, ಬಿ.ಸಿ.ಹರೀಶ್ ಇದ್ದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾದರು. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಮಾಜ ಕಲ್ಯಾಣ ಸಚಿವ ಡಾ. ಎಚ್.ಸಿ. ಮಹಾದೇವಪ್ಪ ಹಾಜರಿದ್ದರು.



ಹೊಳಕೆರೆ ಪಟ್ಟಣದ ಪತ್ರಿಕಾ ಭವನದಲ್ಲಿ ಗಣೇಶ ಹಬ್ಬದ ಅಂಗವಾಗಿ ವಿಶೇಷ ಪೂಜೆ ಸಲ್ಲಿಸಲಾಯಿತು. ಸಂಘದ .ಉಪಾಧ್ಯಕ್ಷ ಎ.ಚಿತ್ರಪ್ಪ, ಮಾಜಿ ಅಧ್ಯಕ್ಷ ಎಸ್. ವೇದಮೂರ್ತಿ, ಜಯಪ್ರಕಾಶ್ ನಿಶಾ ಸುರೇಶ್, ಮಧು, ಶ್ರೀನಿವಾಸ್ ಇದ್ದರು.

# ಶ್ರೀಗಣೇಶನ ಹಬ್ಬದ ಆಚರಣೆ ನಮ್ಮೆಲ್ಲರ ಸ್ವಾಭಿಮಾನದ ಸಂಕೇತ: ಸಂಜೀವಮೂರ್ತಿ

» **ಚಳ್ಳಕೆರೆ**

ನಗರದ ಛೇಂಬರ್ ಆಫ್ ಕಾರ್ಮಸ್ ಮುಂಭಾಗದಲ್ಲಿ ಶಿವನಗರದ ನಾಗರೀಕರು ಶ್ರೀಗಣೇಶ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು. ಪ್ರತಿವರ್ಷದಂತೆ ಈ ವರ್ಷವೂ ಆಗಮಿಸಿದ ಭಕ್ತರಿಗೆ ಪ್ರಸಾದ ವ್ಯವಸ್ಥೆಯನ್ನು ಮಾಡಲಾಗಿತ್ತು.

ವೆಂಕಟಸಾಯಿ ಸೇವಾ ಟ್ರಸ್ಟ್ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ಗಣೇಶನ ಚತುರ್ಥಿ ಹಬ್ಬವನ್ನು ನಾಡಿನೆಲ್ಲೆಡೆ ಸಂಭ್ರಮದಿಂದ ಆಚರಣೆ ಮಾಡಲಾಗುತ್ತಿದೆ. ಇಂದು ಪ್ರತಿಯೊಬ್ಬರೂ ಧಾರ್ಮಿಕ ಕಾರ್ಯಕ್ರಮಗಳ ಬಗ್ಗೆ ಹೆಚ್ಚು ಆಸಕ್ತಿ ವಹಿಸುತ್ತಿರುವುದು ಒಳ್ಳೆಯ ಲಕ್ಷಣ. ಕಾರಣ, ನಾವು ಕಳೆದ ಸಾವಿರಾರು ವರ್ಷಗಳಿಂದ ಧಾರ್ಮಿಕ ವಿಚಾರಧಾರೆಗಳನ್ನೇ ಆಧಾರವಾಗಿಟ್ಟುಕೊಂಡು ನಮ್ಮ ಬದುಕನ್ನು ನಡೆಸಿಕೊಂಡು ಬಂದಿದ್ದೇವೆ. ಇಂದು ಸ್ವಾಭಿಮಾನದ ಪ್ರಶ್ನೆಯಾಗಿ ಬದಲಾಗಿದೆ. ಪ್ರತಿನಿತ್ಯ ನಮ್ಮೆಲ್ಲರಿಗೂ ಶ್ರೀಗಣೇಶನ ಅನುಗ್ರಹ ಹಾಗೂ ಆಶೀರ್ವಾದ ಬೇಕಾಗುತ್ತದೆ. ಭಕ್ತರ ಕೋರಿಕೆಗಳನ್ನು ಈಡೇರಿಸುವ ಮೂಲಕ ಶ್ರೀಗಣೇಶ ಎಲ್ಲರ ಮೆಚ್ಚುಗೆಯ ದೇವರಾಗಿದ್ದಾನೆಂದರು.



ವಾಣಿಜ್ಯೋದ್ಯಮಿ ಎಂ.ಸಂಜೀವಪ್ಪ(ರಾಜಣ್ಣ) ಮಾತನಾಡಿ, ಶ್ರೀಗಣೇಶ ಚತುರ್ಥಿ ಹಬ್ಬಕ್ಕೆ ನೂರಾರು ವರ್ಷಗಳ ಇತಿಹಾಸವಿದೆ. ಈ ಹಿಂದೆ ಕೇವಲ ನಗರ ಪ್ರದೇಶಕ್ಕೆ ಸೀಮಿತವಾಗಿದ್ದ ಈ ಗಣೇಶಹಬ್ಬ ಇಂದು ನಗರ ಮತ್ತು ಗ್ರಾಮೀಣ ಪ್ರದೇಶಗಳ ಗಲ್ಲಿಗಲ್ಲಿಗಳಲ್ಲಿ ಆರಂಭವಾಗಿದೆ. ಅತಿಹೆಚ್ಚಿನ ಉತ್ಸಾಹವನ್ನು ಈ ಹಬ್ಬದಲ್ಲಿ ನಾವೆಲ್ಲರೂ ಕಾಣಬಹುದು. ಗಣೇಶ ಚತುರ್ಥಿ ಆಚರಣೆ ಎಂದರೆ ನಮ್ಮೆಲ್ಲರಿಗೂ ಧಾರ್ಮಿಕ ಪರಂಪರೆಯ ಹಬ್ಬವಾಗಿದೆ. ಎಂತಹ ಸಮಸ್ಯೆ ಎದುರಾದರೂ ಅದನ್ನು ಬದಿಗೊತ್ತಿ ಈ ಹಬ್ಬದ ಆಚರಣೆಯಲ್ಲಿ ತೊಡಗುತ್ತೇವೆ. ಗಣೇಶ ಎಲ್ಲರಿಗೂ ಒಳ್ಳೆಯದ್ದನ್ನು ಮಾಡಲಿ ಎಂದರು. ಕಾರ್ಯಕ್ರಮದಲ್ಲಿ ಡಾ.ಕೆ.ಪಿ.ನಾಗಭೂಷಣ್, ಕೋಟಿಪ್ರಕಾಶ್, ವೀರೇಶ್ ಭಾಗವಹಿಸಿದ್ದರು.

## ಮಳೆ ನೀರು ಹರಿದು ಹೋಗುವಂತೆ ಮಾಡಲು ಆಯುಕ್ತರಿಗೆ ಮನವಿ



**ಚಿತ್ರದುರ್ಗ:** ನಗರದ ಪ್ರಮುಖ ರಸ್ತೆಗಳು ಅವೈಜ್ಞಾನಿಕವಾಗಿದ್ದು, ಮಳೆ ಬಂದಾಗ ನೀರು ಸರಾಗವಾಗಿ ಹರಿದು ಹೋಗಲು ದಾರಿಯಿಲ್ಲದ ಕಾರಣ ರಸ್ತೆಯಲ್ಲೇ ನೀರು ನಿಲ್ಲುವುದರಿಂದ ಸಾರ್ವಜನಿಕರು ಹಾಗೂ ವಾಹನಗಳ ಸಂಚಾರಕ್ಕೆ ಅಡಚಣೆಯುಂಟಾಗುತ್ತಿರುವುದನ್ನು ಸರಿಪಡಿಸುವಂತೆ ಕರುನಾಡ ವಿಜಯಸೇನೆಯಿಂದ ನಗರಸಭೆ ಪೌರಾಯುಕ್ತರಿಗೆ ಬುಧವಾರ ಮನವಿ ಸಲ್ಲಿಸಲಾಯಿತು. ಬಿ.ಡಿ.ರಸ್ತೆ, ಐ.ಯು.ಡಿ.ಪಿ. ಲೇಔಟ್, ಜೆ.ಸಿ.ಆರ್.ರಸ್ತೆ, ಆರ್.ಟಿ.ಓ.ಕಚೇರಿ ರಸ್ತೆ, ಹೊಳಲ್ಕೆರೆ ರಸ್ತೆ, ಮೆದೇಹಳ್ಳಿ ರಸ್ತೆ, ಕೆ.ಎಸ್.ಆರ್.ಟಿ.ಸಿ. ಸೇರಿದಂತೆ ಇನ್ನು ಅನೇಕ ಕಡೆ ಸಿ.ಸಿ.ರಸ್ತೆಗಳು ಕಳಪೆ ಗುಣಮಟ್ಟದಿಂದ ಕೂಡಿದ್ದು, ಮಳೆ ಬಂದರೆ ನೀರು ಹರಿಯದೆ ರಸ್ತೆ ಮೇಲೆಲ್ಲಾ ನಿಲ್ಲುತ್ತದೆ. ರಸ್ತೆಗಳ ಎರಡು ಬದಿಗಳಲ್ಲಿ ಚರಂಡಿ ನಿರ್ಮಾಣವಾಗಿಲ್ಲದಿರುವುದರಿಂದ ಇಂತಹ ಪಜೀತಿ ಅನುಭವಿಸುವಂತಾಗಿದೆ. ರಾಜಕಾಲುವೆಗಳು ಒತ್ತುವರಿಯಾಗಿದ್ದು, ಹೂಳು ತುಂಬಿಕೊಂಡಿದೆ. ಇಂಜಿನಿಯರ್‌ಗಳು ಏಕೆ ಇತ್ತ ಗಮನ ಹರಿಸುತ್ತಿಲ್ಲ. ಕೂಡಲೆ ರಾಜಕಾಲುವೆಗಳ ಮೇಲೆ ಒತ್ತುವರಿಯಾಗಿರುವುದನ್ನು ತೆರವುಗೊಳಿಸಬೇಕೆಂದು ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ನಗರಸಭೆ ಪೌರಾಯುಕ್ತರನ್ನು ಒತ್ತಾಯಿಸಿದರು.

## ಪ್ರಮುಖ ಸುದ್ದಿ

# ಅಭಿವೃದ್ದಿಯತ್ತ ವಿಶ್ವಮಾನವ ಅಲ್ಪಸಂಖ್ಯಾತರ ಸಹಕಾರ ಸಂಘ





» **ಚಿತ್ರದುರ್ಗ**

ಸದಸ್ಯರ ಸಹಕಾರದಿಂದ ವಿಶ್ವಮಾನವ ಅಲ್ಪಸಂಖ್ಯಾತರ ಪತ್ತಿನ ಸಹಕಾರ ಸಂಘ ಅಭಿವೃದ್ದಿಯತ್ತ ಮುನ್ನಡೆಯುತ್ತಿದ್ದು, ಮುಂದಿನ ದಿನಗಳಲ್ಲಿ ಲಾಭಾಂಶ ಕಾಣಬಹುದು ಎಂದು ಸಂಘದ ಅಧ್ಯಕ್ಷ ಹೆಚ್.ಜಲೀಲ್‌ಸಾಬ್ ತಿಳಿಸಿದರು.

ಎ.ಪಿ.ಎಂ.ಸಿ. ಆವರಣದಲ್ಲಿರುವ ಐ.ಎ.ಟಿ. ಸಭಾಂಗಣದಲ್ಲಿ ಇತ್ತೀಚೆಗೆ ನಡೆದ ವಿಶ್ವಮಾನವ ಅಲ್ಪಸಂಖ್ಯಾತರ ಪತ್ತಿನ ಸಹಕಾರ ಸಂಘದ 2022-23 ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಉದ್ಘಾಟಿಸಿ ಮಾತನಾಡಿದರು.

589 ಸದಸ್ಯರುಗಳಿದ್ದು, ಏಳು ಲಕ್ಷ 95 ಸಾವಿರ ರೂ. ಷೇರು ಬಂಡವಾಳವಿದೆ. 22 ಮಂದಿ ಸದಸ್ಯತ್ವ ಪಡೆದುಕೊಂಡಿದ್ದಾರೆ. 4 ಲಕ್ಷ 51 ಸಾವಿರದ 250 ರೂ. ಠೇವಣಿಯಿದ್ದು, 7.5 ಲಕ್ಷ ರೂ.ಗಳ ಸಾಲ ನೀಡಲಾಗಿದೆ. ಸಾಲಗಾರರು ನಿಗಧಿತ ಸಮಯಕ್ಕೆ ಸರಿಯಾಗಿ ಅಸಲು ಮತ್ತು ಬಡ್ಡಿಯನ್ನು ಪಾವತಿಸಿ ಸಂಘದ ಏಳಿಗೆಗೆ ಕೈಜೋಡಿಸುವಂತೆ ಮನವಿ ಮಾಡಿದರು.

ಸಾಲಗಾರರಷ್ಟೆ ಜಾಮೀನುದಾರರ ಮೇಲೆ ಜವಾಬ್ದಾರಿಯಿದೆ ಎನ್ನುವುದನ್ನು ಮರೆಯಬಾರದು. ಸಣ್ಣ ಪ್ರಮಾಣದ ನಿರೀಕ್ಷೆ ಮುಟ್ಟಿದರೆ ಸಮಾಜಕ್ಕೆ ಉಪಯುಕ್ತವಾದ ಸಹಾಯ ಮಾಡಲು ಆಗುತ್ತದೆ. ವಿಶ್ವಮಾನವ ಅಲ್ಪಸಂಖ್ಯಾತರ ಪತ್ತಿನ ಸಹಕಾರ ಸಂಘಕ್ಕೆ ಶಕ್ತಿ ಬರಬೇಕಾದರೆ ಠೇವಣಿ,ಷೇರುದಾರರು ಜಾಸ್ತಿಯಾಗಬೇಕು. ಠೇವಣಿ ಹಣಕ್ಕೆ ಯಾವುದೇ ರೀತಿಯ ಧಕ್ಕೆ ಬಾರದಂತೆ ನಿಭಾಯಿಸುತ್ತೇವೆ. ಅನುಮಾನ ಪಡುವುದು ಬೇಡ. ಚಳ್ಳಕೆರೆ, ಹಿರಿಯೂರು, ಚಿಕ್ಕಜಾಜೂರಿನಲ್ಲಿ ಶಾಖೆ ತೆರೆಯಬೇಕೆಂದುಕೊಂಡಿದ್ದೇವೆ. ನಮ್ಮ ವಹಿವಾಟು ಸರಿಯಾಗಿದ್ದರೆ ವರ್ಷಕ್ಕೊಮ್ಮೆ ಸರ್ವ ಸದಸ್ಯರ ಸಭೆ ಕರೆದು ಸಲಹೆ ಸೂಚನೆಗಳನ್ನು ಪಡೆದುಕೊಳ್ಳಲಾಗುತ್ತದೆ. ಸದಸ್ಯರು ಸಕ್ರಿಯವಾಗಿ ವ್ಯವಹಾರಗಳಲ್ಲಿ ಭಾಗಿಯಾಗಬೇಕೆಂದು ಹೇಳಿದರು.

ವಿಶ್ವಮಾನವ ಅಲ್ಪಸಂಖ್ಯಾತರ ಪತ್ತಿನ ಸಹಕಾರಸಂಘದಉಪಾಧ್ಯಕ್ಷಎಸ್.ರಶೀದ್, ನಿರ್ದೇಶಕರುಗಳಾದ ಸಿ.ಇಮಾಂಸಾಬ್, ಎಚ್.ಮೌಲಾನ ತಾಳವಟ್ಟಿ, ಇ.ಮಹಮದ್ ಅಲಿ, ಜಿ.ಸುಭಾನು, ಹೆಚ್.ಅಬ್ದುಲ್ ಲತೀಫ್, ಷೇಕ್‌ಬುಡೇನ್‌ಸಾಬ್, ಎಂ.ಜಿ.ಶಫಿವುಲ್ಲಾ, ಪಿ.ದಾದಾವಲಿ, ಪಿ.ಬಷೀರ್ ಅಹಮದ್, ಟಿ.ಮೆಹಬೂಬ್, ಜಿ.ದಾದಾಬುಡೇನ್‌ಸಾಬ್, ಪಿ.ಸಲೀಮಾ, ವೇದಿಕೆಯಲ್ಲಿದ್ದರು.

## ಫಾಸ್ಟ್ ನ್ಯೂಸ್

### ಜಿಲ್ಲಾ ಮಟ್ಟದ ಚೆಸ್ ಪಂದ್ಯ: ರಾಜ್ಯಮಟ್ಟಕ್ಕೆ ವಾಸವಿ ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳು ಆಯ್ಕೆ



» **ಚಳ್ಳಕೆರೆ**

ಜಿಲ್ಲೆಯ ಹಿರಿಯ ಪ್ರಾಥಮಿಕ ಶಾಲಾ ವಿಭಾಗದಲ್ಲಿ ಜಿಲ್ಲಾ ಮಟ್ಟದ ಚೆಸ್ ಪಂದ್ಯಾಬಳಿಯಲ್ಲಿ ಇಲ್ಲಿನ ವಾಸವಿ ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳಾದ ಎಂ.ಜಿ.ಲಲಿತ್‌ಕಿಶನ್, ಜಿ.ವಿ.ಮಂಜುನಾಥ ಜಿಲ್ಲಾ ಮಟ್ಟದಲ್ಲಿ ಪ್ರಶಸ್ತಿ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ, ಇತ್ತೀಚೆಗೆ ನಡೆದ ಕ್ರೀಡೆಗಳಲ್ಲೂ ಸಹ ವಿಭಾಗ, ರಾಜ್ಯಮಟ್ಟಕ್ಕೆ ಕ್ರೀಡಾಪಟುಗಳು ತಲುಪಿದ್ದು, ಚೆಸ್ ಪಂದ್ಯಾದಲ್ಲೂ ಸಹ ರಾಜ್ಯಮಟ್ಟಕ್ಕೆ ನಮ್ಮ ತಾಲ್ಲೂಕಿನ ವಿದ್ಯಾರ್ಥಿಗಳು ಪಾದರ್ಪಣೆ ಮಾಡುತ್ತಿರುವುದು ಸಂತಸ ತಂದಿದೆ ಎಂದರು. ವಿದ್ಯಾರ್ಥಿಗಳ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದರು. ತಾಲ್ಲೂಕು ದೈಹಿಕ ಶಿಕ್ಷಣ ವಿಷಯ ಪರಿವೀಕ್ಷಕ ಗುರುಮೂರ್ತಿ, ವಾಸವಿ ವಿದ್ಯಾಸಂಸ್ಥೆಯ ಆಡಳಿತ ಮಂಡಳಿ ವಿದ್ಯಾರ್ಥಿಗಳನ್ನು ಅಭಿನಂದಿಸಿದೆ.

### ಹಿಂದೂಮಹಾಗಣಪತಿ ಉತ್ಸವ : ಇಂದು ವಿಶೇಷ ಗಮಕ ವಾಚನ ಕಾರ್ಯಕ್ರಮ.

» **ಚಳ್ಳಕೆರೆ**

ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ವಿಶ್ವಹಿಂದೂ ಪರಿಷತ್ ಮತ್ತು ಭಜರಂಗದಳ ಸಂಘಟನೆಗಳ ನೇತೃತ್ವದ ಹಿಂದೂಮಹಾಗಣಪತಿ ಉತ್ಸವ ವಿಜೃಂಭಣೆಯಿಂದ ನಡೆಯುತ್ತಿದ್ದು, ಪ್ರತಿನಿತ್ಯ ಹಲವಾರು ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದು ಸಲಹಾ ಸಮಿತಿ ಸದಸ್ಯ ಬಾಳೆಮಂಡಿರಾಮದಾಸ್ ತಿಳಿಸಿದ್ದಾರೆ. ಅವರು, ಈಬಗ್ಗೆ ಮಾಹಿತಿ ನೀಡಿ ಸೆ. 18ರಿಂದ30ರ ತನಕ ಒಟ್ಟು 13ದಿನಗಳ ಕಾಲ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಸಮಾಜ ಚಿಂತಕರೂ ಸೇರಿದಂತೆ ಹಲವಾರು ಪ್ರಬುದ್ದ ಗೋಷ್ಠಿಗಳನ್ನು ಹಮ್ಮಿಕೊಳ್ಳಲಾಗಿದೆ. ಸೆ.21ರ ಗುರುವಾರ ಚಂಪಕ ಶ್ರೀಧರ್ ಮತ್ತು ಜಯಪ್ರಾಣೇಶ್‌ರವರಿಂದ ವಿಶೇಷ ಗಮಕಸೌರಭ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸೆ.24ರ ಭಾನುವಾರನಾಡಿನಹೆಸರಾಂತಜಾನಪದವಿದ್ವಾಂಸ ಗುರುರಾಜ್ ಹೊಸಕೋಟೆಯವರ ಸಂಗೀತ ಕಾರ್ಯಕ್ರಮ ಹಮ್ಮಿಕೊಂಡಿದ್ದು ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಶ್ರೀಗಣೇಶನ ಅನುಗ್ರಹಕ್ಕೆ ಪಾತ್ರರಾಗುವಂತೆ ಮನವಿ ಮಾಡಿದ್ದಾರೆ.



ಚಿಕ್ಕಬೆನ್ನೂರು ವಿವಿದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಸಂಘದ ಸದಸ್ಯರ ಪ್ರತಿಭಾವಂತ ಮಕ್ಕಳಿಗೆ ಪುರಸ್ಕಾರ.



ಚಿತ್ರದುರ್ಗಕೆ ಇ.ಬಿ.ಬಾಯ್ಸ್ ವತಿಯಿಂದ ಜೆ.ಸಿ.ಆರ್.ಕೆ.ಇ.ಬಿ. ಕಾಲೋನಿಯಲ್ಲಿ 21 ನೇ ವರ್ಷದ ವಿನಾಯಕನನ್ನು ಪ್ರತಿಷ್ಠಾಪಿಸಿ ಶ್ರದ್ಧಾ ಭಕ್ತಿಯಿಂದ ಪೂಜಿಸಲಾಗುತ್ತಿದೆ. ಸಿಂಹದ ಮೇಲೆ ವಿರಾಜಮಾನವಾಗಿರುವ ಗಣಪತಿ ಎಡಗೈಯಲ್ಲಿ ತ್ರಿಶೂಲ ಹಿಡಿದಿದೆ. ದಿನಕ್ಕೆ ನೂರಾರು ಭಕ್ತರು ಧಾವಿಸಿ ಗಣಪತಿಯ ದರ್ಶನ ಪಡೆದು ಭಕ್ತಿ ಸಮರ್ಪಿಸುತ್ತಿದ್ದಾರೆ.




ತುರುವನೂರು ರಸ್ತೆಯಲ್ಲಿರುವ ಉದ್ಯಾನವನದಲ್ಲಿ ಡಾ.ವಿಷ್ಣುವರ್ಧನ್‌ರವರ ಹುಟ್ಟುಹಬ್ಬ ಆಚರಣೆ.

# ಕೃಷಿಯಲ್ಲಿ ಹೊಸ ತಂತ್ರಜ್ಞಾನ ಬಳಸಿಕೊಳ್ಳಿ



» **ಚಿತ್ರದುರ್ಗ**

ಹೊಸ ಹೊಸ ಬದಲಾವಣೆಗಳಿಗೆ ತಕ್ಕಂತೆ ರೈತರು ಕೃಷಿಯಲ್ಲಿ ತೊಡಗಿಕೊಳ್ಳುವಂತೆ ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ.ಬಿ.ಮಂಜುನಾಥ್ ಕರೆ ನೀಡಿದರು.

ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಶಿವಮೊಗ್ಗ, ಅಡಿಕೆ ಸಂಶೋಧನಾ ಕೇಂದ್ರ ನವಿಲೆ, ಕೃಷಿ ತಂತ್ರಜ್ಞರ ಸಂಸ್ಥೆ, ರೆಡ್ಡಿ ಸಮಾಜ ಚಿತ್ರದುರ್ಗ ಇವುಗಳ ಸಹಯೋಗದೊಂದಿಗೆ ಎ.ಪಿ.ಎಂ.ಸಿ. ಆವರಣದಲ್ಲಿರುವ ಕೃಷಿ ತಂತ್ರಜ್ಞರ ಸಂಸ್ಥೆಯಲ್ಲಿ ಮಂಗಳವಾರ ನಡೆದ ಅಡಿಕೆ ಬೇಸಾಯ ಕ್ರಮಗಳು ಕುರಿತ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ರೈತರ ಆಶಾಯದಾಯಕ ಚಿಂತನೆ, ಏಳಿಗೆ, ಉನ್ನತಿಗಾಗಿ ಇಂತಹ ಕಾರ್ಯಾಗಾರಗಳು ಬೇಕು. ಹಿಂದಿನ ಕಾಲದಲ್ಲಿ ಸಾಂಪ್ರದಾಯಕ, ನೈಸರ್ಗಿಕ, ಸಾವಯವ ಕೃಷಿಯಿತ್ತು. ಈಗ ಪಾಲಿ ಹೌಸ್, ಗ್ರೀನ್ ಹೌಸ್‌ಗಳು ಬಂದಿದೆ. ಹಳೆಯ ಕಾಲದ ಕೃಷಿಗೂ ಇಂದಿನ ಕೃಷಿಗೂ ಅಜಗಜಾಂತರ ವ್ಯತ್ಯಾಸವಿದೆ. ಹಿಂದೆ ರಾಸಾಯನಿಕ ಗೊಬ್ಬರ, ಲಘು ಪೋಷಕಾಂಶ, ಹೈಬ್ರಿಡ್ ತಳಿಗಳನ್ನು ಬಳಸದೆ ರೈತರು ಪೌಷ್ಠಿಕಾಂಶ ಬೆಳೆ ಬೆಳೆಯುತ್ತಿದ್ದರು. ಈಗ ಹೆಚ್ಚು ಇಳುವರಿ ಸಿಕ್ಕರೂ ರೋಗಗಳಿಗೆ ತುತ್ತಾಗಬಹುದು. ಅದಕ್ಕಾಗಿ ಇಂತಹ ಕಾರ್ಯಾಗಾರಗಳ ಮೂಲಕ ರೈತರಿಗೆ ಮಾಹಿತಿ ನೀಡಿದರೆ ಸಫಲತೆ ಕಾಣಬಹುದು ಎಂದು ಹೇಳಿದರು.

ಮಳೆಯಲ್ಲಿ ಏರುಪೇರಾಗಿರುವುದರಿಂದ ಮುಂಗಾರು ಹಂಗಾಮಿನ ಬೆಳೆ ಸಿಗುವುದು ಕಷ್ಟವಾಗಿದೆ. ಹತ್ತೊಂಬತ್ತು ರೈತ ಉತ್ಪಾದಕರ ಸಂಘಗಳ ಮೂಲಕ ಹದಿನಾರು ಸಾವಿರ ರೈತರು ಶೇರುದಾರರಾಗಿದ್ದಾರೆ. ಹಲವಾರು ಸಂಸ್ಥೆಗಳು ರೀಟೆಲ್ ಮಾರುಕಟ್ಟೆಗೆ ಪ್ರವೇಶಿಸುತ್ತಿವೆ. ಮೂರು ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮೆಣಸಿನಕಾಯಿ ಬೆಳೆಯಲಾಗುತ್ತಿದೆ. ಅಷ್ಟೆ ರೋಗಗಳು ಕಾಣಿಸಿಕೊಳ್ಳುತ್ತಿರುವುದರಿಂದ ರೈತರಿಗೆ ಸಕಾಲಕ್ಕೆ ಮಾಹಿತಿ ನೀಡಿದಾಗ ಸಮಸ್ಯೆಗಳನ್ನು ನೀಗಿಸಿ ಬದುಕು ಕಟ್ಟಿಕೊಳ್ಳಬಹುದು ಎಂದು ತಿಳಿಸಿದರು.

ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಡಾ.ಸವಿತ ಮಾತನಾಡಿ ಕಳೆದ ಎರಡು ವರ್ಷದಿಂದ ಜಿಲ್ಲೆಯಲ್ಲಿ 35 ಸಾವಿರ ಹೆಕ್ಟೇರ್‌ನಲ್ಲಿ ಬೆಳೆಯಲಾಗುತ್ತಿದ್ದ ಅಡಿಕೆ ಈಗ 50 ರಿಂದ 55 ಸಾವಿರ ಹೆಕ್ಟೇರ್‌ಗೆ ವಿಸ್ತರಣೆಯಾಗಿದೆ. ಮಾರುಕಟ್ಟೆ ಸಮಸ್ಯೆ ಕೂಡ ಇದೆ. ಏನೇನು ಪೋಷಕಾಂಶ ಕೊಡಬೇಕು. ವಾಣಿಜ್ಯ ಬೆಳೆ ಅಡಿಕೆಗೆ ಯಾವ ರೋಗ ಬಾಧಿಸುತ್ತದೆ. ಏನು ಔಷಧಿ ಸಿಂಪಡಿಸಬೇಕು ಎನ್ನುವ ಮಾಹಿತಿಯನ್ನು ಇಂತಹ ಕಾರ್ಯಾಗಾರಗಳ ಮೂಲಕ ರೈತರಿಗೆ ತಿಳಿಸಬೇಕು. ಜಿಲ್ಲೆಯಲ್ಲಿ ಹಣ್ಣು, ಹೂವು, ತರಕಾರಿ, ದಾಳಿಂಬೆ, ಪಪ್ಪಾಯಿ, ಈರುಳ್ಳಿ, ಗೋಡಂಬಿ, ಡ್ರಾಗನ್ ಫ್ರೂಟ್‌ಗಳನ್ನು ಬೆಳೆಯಲಾಗುತ್ತಿದೆ. ರೈತರು ಬೆಳೆದ ಬೆಳೆಗಳಿಗೆ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವುದು ಮುಖ್ಯ ಎಂದು ಹೇಳಿದರು.

ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ ಬಬ್ಬೂರಿನ ಸಹ ಸಂಶೋಧನಾ ನಿರ್ದೇಶಕ ಡಾ.ಸುರೇಶ ಏಕಬೋಟೆ ಮಾತನಾಡುತ್ತ ತಾಂತ್ರಿಕ ವಿಸ್ತರಣೆ, ರೈತರಿಗೆ ಕಾಡುತ್ತಿರುವ ಸಮಸ್ಯೆ, ಅಡಿಕೆಯಲ್ಲಿ ಅಂತರ್ ಬೆಳೆಯಾಗಿ ಏನೇನು ಬೆಳೆಯಬಹುದು ಎನ್ನುವುದನ್ನು ಈ ಕಾರ್ಯಾಗಾರದಲ್ಲಿ ಮಾಹಿತಿ ನೀಡಲಾಗುವುದು. ಅಡಿಕೆ ಫಸಲು ಕೈಗೆ ಸಿಗಲು ಐದಾರು ವರ್ಷಗಳ ಕಾಲ ಕಾಯಬೇಕು. ಅಲ್ಲಿಯತನಕ ಅಂತರ್‌ಬೆಳೆಯನ್ನು ಬೆಳೆಯಲು ರೈತರು ಮುಂದಾಗಬೇಕೆಂದರು.

ಕಾರ್ಯಾಗಾರದ ಅಧ್ಯಕ್ಷತೆ ವಹಿಸಿದ ಕೃಷಿ ತಂತ್ರಜ್ಞರ ಸಂಸ್ಥೆ ಅಧ್ಯಕ್ಷ ಜಿ.ಸಿ.ರಂಗಸ್ವಾಮಿ ಮಾತನಾಡಿ ಮಧ್ಯಕರ್ನಾಟಕದ ಬಯಲುಸೀಮೆ ಚಿತ್ರದುರ್ಗ ಜಿಲ್ಲೆಯಲ್ಲಿ ಅಡಿಕೆ ಬೆಳೆ ಪ್ರಾಮುಖ್ಯತೆ ಪಡೆದಿದೆಯಾದರೂ ಅಷ್ಟೆ ವೇಗವಾಗಿ ರೋಗಗಳು ಕಾಣಿಸಿಕೊಳ್ಳುತ್ತಿರುವುದರಿಂದ ಅಡಿಕೆ ಬೆಳೆಯುವ ರೈತರು ಸಂದಿಗ್ದ ಪರಿಸ್ಥಿತಿಯನ್ನು ಎದುರಿಸುವಂತಾಗಿದೆ. ಮಾರುಕಟ್ಟೆಯಲ್ಲಿ ದರಗಳು ಏರುಪೇರಾಗುತ್ತಿರುವುದು ರೈತನನ್ನು ಇನ್ನಷ್ಟು ಸಂಕಷ್ಟಕ್ಕೀಡು ಮಾಡಿದೆ. ಹಾಗಾಗಿ ಇಂತಹ ಕಾರ್ಯಾಗಾರಗಳಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮಾಹಿತಿಗಳನ್ನು ತಿಳಿದುಕೊಂಡು ಕೃಷಿಯಲ್ಲಿ ಅಳವಡಿಸಿಕೊಳ್ಳಬೇಕೆಂದು ವಿನಂತಿಸಿದರು.

ಸಕಾಲಕ್ಕೆ ಸರಿಯಾಗಿ ಮಳೆ ಬಾರದ ಕಾರಣ ತೋಟಗಳು ಒಣಗುತ್ತಿರುವುದರಿಂದ ನೀರಿನ ಕೊರತೆ ಕಾಡುತ್ತಿದೆ. ಬೋರ್‌ವೆಲ್‌ಗಳ ಸಮೀಪ ಇಂಗು ಗುಂಡಿಗಳನ್ನು ಮಾಡಿಕೊಳ್ಳಬೇಕು. ಅಡಿಕೆ ಸಿಪ್ಪೆಯನ್ನು ಬಹಳಷ್ಟು ರೈತರು ಬಿಸಾಡುತ್ತಿದ್ದಾರೆ. ಕೆಲವರು ಅಡಿಕೆ ಸಿಪ್ಪೆಯಲ್ಲಿ ಕಾಂಪೋಸ್ಟ್ ತಯಾರಿಸಿಕೊಂಡು ತೋಟಕ್ಕೆ ಬಳಸಿಕೊಳ್ಳುತ್ತಿರುವುದುಂಟು. ಅಡಿಕೆಗೆ ಎಲೆಚುಕ್ಕೆ ರೋಗ ಬಂದಿದೆ. ಅದಕ್ಕಾಗಿ ತಾಂತ್ರಿಕ ಮಾಹಿತಿ ರೈತರಿಗೆ ಅತ್ಯವಶ್ಯಕ ಎಂದು ಹೇಳಿದರು.

ಚಿತ್ರದುರ್ಗ ರೆಡ್ಡಿ ಸಮಾಜದ ಅಧ್ಯಕ್ಷ ಸಿ.ರಾಘವರೆಡ್ಡಿ, ಕೃಷಿ ತಂತ್ರಜ್ಞರ ಸಂಸ್ಥೆ ಉಪಾಧ್ಯಕ್ಷ ಕೆ.ಶ್ರೀನಿವಾಸ್‌ರೆಡ್ಡಿ, ಕಾರ್ಯದರ್ಶಿ ಜಿ.ಟಿ.ವೀರಭದ್ರರೆಡ್ಡಿ,ಡಾ.ಬಿ. ಸತ್ಯನಾರಾಯಣರೆಡ್ಡಿ ವೇದಿಕೆಯಲ್ಲಿದ್ದರು.

ಅಡಿಕೆ ಸಂಶೋಧನಾ ಕೇಂದ್ರ ನವಿಲೆ ಶಿವಮೊಗ್ಗದ ಮುಖ್ಯಸ್ಥ ಡಾ.ನಾಗರಾಜಪ್ಪ ಅಡಿವೆಪ್ಪರ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಅಡಿಕೆಯಲ್ಲಿ ಕಂಡು ಬರುವ ಪ್ರಮುಖ ಕೀಟಗಳ ನಿರ್ವಹಣೆ ಕುರಿತು ಸಸ್ಯ ಸಂರಕ್ಷಣೆ ಕೆ.ವಿ.ಕೆ. ಹಿರಿಯೂರಿನ ವಿಷಯ ತಜ್ಞ ಡಾ.ಓಂಕಾರಪ್ಪ, ಅಡಿಕೆ ಸಿಪ್ಪೆಯಿಂದ ಕಾಂಪೋಸ್ಟ್ ತಯಾರಿಕೆ ಕುರಿತು ಅಡಿಕೆ ಸಂಶೋಧನಾ ಕೇಂದ್ರ ನವಿಲೆ ಶಿವಮೊಗ್ಗದ ಹಿರಿಯ ಸಂಶೋಧನಾ ಸಹಾಯಕಿ ಡಾ.ಸ್ವಾತಿ ಹೆಚ್.ಸಿ. ಅಡಿಕೆ ಸಸ್ಯಾಭಿವೃದ್ದಿ ಬಗ್ಗೆ ತೋಟಗಾರಿಕೆ ಹಿರಿಯ ಸಂಶೋಧನಾ ಸಹಾಯಕ ಅಡಿಕೆ ಸಂಶೋಧನಾ ಕೇಂದ್ರ ನವಿಲೆಯ ಡಾ.ಸುದೀಪ್ ಹೆಚ್.ಪಿ. ಅಡಿಕೆಯಲ್ಲಿ ಕಂಡು ಬರುವ ಪ್ರಮುಖ ರೋಗಗಳ ನಿರ್ವಹಣೆ ಕುರಿತು ಹಿರಿಯ ಸಂಶೋಧನಾ ಸಹಾಯಕ ಕಿರಣ್‌ಕುಮಾರ್ ಎಸ್.ಜೆ. ಅಡಿಕೆಯಲ್ಲಿ ಸಮಗ್ರ ಬೇಸಾಯ ಪದ್ದತಿ ಬಗ್ಗೆ ಅಡಿಕೆ ಸಂಶೋಧನಾ ಕೇಂದ್ರ ನವಿಲೆ ಮುಖ್ಯಸ್ಥ ಡಾ.ನಾಗರಾಜಪ್ಪ ಅಡಿವೆಪ್ಪರ್ ರೈತರಿಗೆ ಉಪನ್ಯಾಸ ನೀಡಿದರು. ನಂತರ ರೈತರೊಂದಿಗೆ ವಿಜ್ಞಾನಿಗಳು ಸಂವಾದ ನಡೆಸಿದರು.

## ಅಂಗನವಾಡಿ ಕೇಂದ್ರಗಳಲ್ಲಿ ಗುಣಮಟ್ಟದ ಪೌಷ್ಟಿಕ ಆಹಾರ ನೀಡಲು ಸೂಚನೆ: ಡಿಸಿ



» **ದಾವಣಗೆರೆ**

ಅಂಗನವಾಡಿ ಕೇಂದ್ರಗಳಲ್ಲಿ ಗರ್ಭಿಣಿ, ಬಾಣಂತಿಯರಿಗೆ ಮತ್ತು ಮಕ್ಕಳಿಗೆ ಉತ್ತಮ ಗುಣಮಟ್ಟದ ಹಾಗೂ ಪೋಷಕಾಂಶಯುತ ಆಹಾರ ಪದಾರ್ಥವನ್ನು ನೀಡಬೇಕು ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು.

ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪೂರಕ ಪೌಷ್ಟಿಕ ಆಹಾರ ಪದಾರ್ಥಗಳ ದರ ನಿಗದಿಗಾಗಿ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆ (ಫಅಅ)ಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಕ್ಕಳು, ಬಾಣಂತಿಯರು ಹಾಗೂ ಗರ್ಭಿಣಿಯರು ಅಪೌಷ್ಟಿಕತೆಗೆ ತುತ್ತಾಗದಂತೆ ನೋಡಿಕೊಳ್ಳುವುದು ಎಲ್ಲರ ಜವಬ್ದಾರಿಯಾಗಿದೆ. ಆದ್ದರಿಂದ ಅಂಗನವಾಡಿ ಕೇಂದ್ರಗಳಲ್ಲಿ ಗುಣಮಟ್ಟದ ಪೌಷ್ಟಿಕ ಅಹಾರ ಹಾಗೂ ಕಡ್ಡಾಯವಾಗಿ ಮೊಳಕೆ ಕಟ್ಟಿದ ಕಾಳುಗಳನ್ನೆ ನೀಡಬೇಕು ಪೌಷ್ಟಿಕಾಂಶದ ಕೊರತೆ ಉಂಟಾದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯು ಕ್ರಮ ವಹಿಸಬೇಕು ಎಂದರು. ಅಂಗನವಾಡಿ ಕೇಂದ್ರಗಳಲ್ಲಿ ಪ್ರತಿದಿನ ಮಧ್ಯಾಹ್ನ ಗರ್ಭಿಣಿಯರಿಗೆ, ಬಾಣಂತಿಯರಿಗೆ ನೀಡುತ್ತಿರುವ ಹಾಲಿನ ಬದಲಾಗಿ ಮೊಸರು ಮಾಡಿಕೊಟ್ಟರೆ ಅವರಲ್ಲಿ ಜೀರ್ಣ ಕ್ರಿಯೆಗೆ ಉಪಯುಕ್ತವಾಗುತ್ತದೆ.

ಪ್ರತಿ ತಿಂಗಳ ಮೂರನೇ ಶನಿವಾರದಂದು ಸ್ಥಳೀಯರ ಸಹಾಯದಿಂದ ಅಂಗನವಾಡಿ ಕೇಂದ್ರದ ಮಕ್ಕಳಿಗೆ ಮಮತೆಯ ಕೈತುತ್ತು ಎಂಬ ಶೀರ್ಷಿಕೆಯಡಿಯಲ್ಲಿ ಪೌಷ್ಟಿಕ ಪದಾರ್ಥಗಳನ್ನು ಒಳಗೊಂಡ ಆಹಾರವನ್ನು ನೀಡಲು ಕ್ರಮವಹಿಸಬೇಕು.

ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ಕೈತೋಟ ನಿರ್ಮಿಸಿ, ಅಕ್ಷಯ ಪಾತ್ರೆಗಳನ್ನಿಟ್ಟು ಸ್ಥಳೀಯವಾಗಿ ಬೆಳೆಯುವಂತಹ ತರಕಾರಿ, ಧಾನ್ಯಗಳನ್ನು ಬಳಸಿ ಆಹಾರ ಪದಾರ್ಥವನ್ನು ತಯಾರಿಸಿ ಗರ್ಭಿಣಿಯರಿಗೆ ಬಾಣಂತಿಯರಿಗೆ ಹಾಗೂ ಮಕ್ಕಳಿಗೆ ನೀಡಬೇಕು.

ಅಂಗನವಾಡಿಗಳಲ್ಲಿ ದೈನಂದಿನ ತಯಾರಿಸುವ ಆಹಾರಗಳ ಪದಾರ್ಥಗಳ ಬದಲಾಗಿ ವಿವಿಧ ರೀತಿಯ ಖಾದ್ಯಗಳನ್ನು ತಯಾರಿಸಿ ಕೊಡಬೇಕು ಎಂದರು.ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ವಾಸಂತಿ ಉಪ್ಪಾರ್, ಜಿಲ್ಲಾ ಸಹಕಾರ ಸಂಘಗಳ ಉಪ ನಿರ್ಬಂದಕರಾದ ಎಸ್. ಮಂಜುಳಾ ಉಪಸ್ಥಿತರಿದ್ದರು.

## ಸಾವಿರಾರು ಅಭಿಮಾನಿಗಳ ಹೃದಯದಲ್ಲಿ ವಿಷ್ಣು ಜೀವಂತ

### ಸೇನಾ ಸಮಿತಿಯಿಂದ ಹುಟ್ಟು ಹಬ್ಬ ಆಚರಣೆ



» **ಚಳ್ಳಕೆರೆ**

ಕನ್ನಡಚಿತ್ರರಂಗದ ಮೇರು ನಟ ಸಾಹಸಸಿಂಹ ಡಾ.ವಿಷ್ಣುವರ್ಧನ್‌ರವರ 73ನೇ ಹುಟ್ಟುಹಬ್ಬವನ್ನು ಡಾ.ವಿಷ್ಣುಸೇನಾ ಸಮಿತಿ ಮತ್ತು ಅವರ ಅಭಿಮಾನಿ ಬಳಗ ಸಂಭ್ರಮದಿಂದ ನಗರದ ನೆಹರೂ ವೃತ್ತದಲ್ಲಿ ಆಚರಿಸಿದರು. ಸೇನೆಯ ಅಧ್ಯಕ್ಷ ರಾಘವೇಂದ್ರ ಮಾತನಾಡಿ, ಕನ್ನಡಚಿತ್ರರಂಗದಲ್ಲಿ ವಿಷ್ಣುವರ್ಧನ್‌ರವರ ಹೆಸರು ಸದಾಕಾಲ ಚಿರಪರಿಚಿತ ವಿಶೇಷವಾಗಿ ಚಿತ್ರದುರ್ಗ ಕೋಟೆಯಲ್ಲಿ ಕಳೆದ 25 ವರ್ಷಗಳ ಹಿಂದೆಯೇ ನಾಗರಹಾವು ಚಿತ್ರದ ಅವರ ರಾಮಾಚಾರಿ ಪಾತ್ರ ಇಂದಿಗೂ ಜನರಲ್ಲಿ ಆಳವಾಗಿ ಬೇರೂರಿದೆ. ಇಷ್ಟಯಲ್ಲದೆ ಹಲವಾರು ಚಿತ್ರಗಳಲ್ಲಿ ಅಮೋಘ ನಟನೆಯಿಂದ ಇಂದಿಗೂ ಲಕ್ಷಾಂತರ ಅಭಿಮಾನಿಗಳ ಮನಸ್ಸಿನಲ್ಲಿ ಉಳಿದಿದ್ದಾರೆ. ವಿಷ್ಣುವರ್ಧನ್ ಅಭಿನಯ ನಮ್ಮೆಲ್ಲರಿಗೂ ಸದಾಕಾಲ ಸ್ಫೂರ್ತಿ ಎಂದರು. ಸೇನೆಯ ಗೌರವಾಧ್ಯಕ್ಷ, ಮಾಜಿ ನಗರಸಭಾ ಉಪಾಧ್ಯಕ್ಷ ರವಿಕುಮಾರ್, ಪ್ರಧಾನಕಾರ್ಯದರ್ಶಿ ಬೆಟ್ಟಪ್ಪ, ಎಸ್.ಎಲ್.ಮಂಜಣ್ಣ, ರಮೇಶ್, ರಾಮಾಚಾರಿ, ಕೃಷ್ಣ, ಸತೀಶ್ ಮುಂತಾದವರು ಉಪಸ್ಥಿತರಿದ್ದರು.

## ಚಿಕ್ಕಬೆನ್ನೂರು ಕೃಷಿ ಸಹಕಾರ ಸಂಘಕ್ಕೆ 7.50 ಲಕ್ಷ ಲಾಭ

**ಚಿತ್ರದುರ್ಗ:** ಚಿಕ್ಕಬೆನ್ನೂರು ವಿವಿದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ನಿ. ಇದರ 2022-23 ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಅನನ್ಯ ಪಬ್ಲಿಕ್ ಸ್ಕೂಲ್ ಆವರಣದಲ್ಲಿ ಇತ್ತೀಚೆಗೆ ನಡೆಯಿತು.

ಸಂಘದ ಅಧ್ಯಕ್ಷ ಜಿ.ಬಿ.ತೀರ್ಥಪ್ಪ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಉದ್ಘಾಟಿಸಿ ಮಾತನಾಡುತ್ತ 2022-23 ನೇ ಸಾಲಿನಲ್ಲಿ ಚಿಕ್ಕಬೆನ್ನೂರು ವಿವಿದ್ದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ 7.50 ಲಕ್ಷ ರೂ. ಲಾಭ ಗಳಿಸಿದ್ದು, ಸಾಲ ಪಡೆದುಕೊಂಡ ಸದಸ್ಯರು ನಿಗಧಿತ ಸಮಯದಲ್ಲಿ ಮರುಪಾವತಿ ಮಾಡಿ ಸಂಘದ ಏಳಿಗೆಗೆ ಸಹಕರಿಸುವಂತೆ ವಿನಂತಿಸಿದರು.

ಮಳೆಯ ಕೊರೆಯಿಂದಾಗಿ ಈ ವರ್ಷ ರೈತರ ಬೆಳೆಗಳು ಹಾಳಾಗಿದ್ದು, ಸಿರಿಗೆರೆಯ ತರಳಬಾಳು ಜಗದ್ಗುರು ಬೃಹನ್ಮಠದ ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಜಿಗಳವರ ಕಾಳಜಿಯಿಂದಾಗಿ ಭರಮಸಾಗರ ಸಿರಿಗೆರೆ ಏತ ನೀರಾವರಿ ಯೋಜನೆಯಿಂದಾಗಿ ಕಳೆದ ಎರಡು ತಿಂಗಳಿನಿಂದಲೂ ಕೆರೆಗಳಿಗೆ ನೀರು ಹರಿಯುತ್ತಿದ್ದು, ತೋಟದ ಬೆಳೆಗಳಿಗೆ ಅನುಕೂಲವಾಗಿರುವುದನ್ನು ಸ್ಮರಿಸಿ ಇದೆ ತಿಂಗಳ 24 ರಂದು ನಡೆಯುವ ಸ್ಮರಣೆಗೆ 1.20 ಲಕ್ಷ ರೂ. ನೀಡಿದ ಚಿಕ್ಕಬೆನ್ನೂರು ಗ್ರಾಮಸ್ಥರಿಗೆ ಅಭಿನಂದಿಸಿದರು.

**ಪ್ರಮುಖ ಸುದ್ದಿ**

# ವರವಿನಾರಹಟ್ಟಿಯಲ್ಲಿ ಅಂಗಡಿ, ಗುಡಿಸಲಿಗೆ ಬೆಂಕಿ





» **ಚಳ್ಳಕೆರೆ**

ತಾಲ್ಲೂಕಿನ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವರವಿನಾರಹಟ್ಟಿಯಲ್ಲಿ ಬುಧವಾರ ಸಂಜೆ 7.50ರ ಸಮಯದಲ್ಲಿ ಅಂಗಡಿ ಹಾಗೂ ಅಂಗಡಿಗೆ ಹೊಂದಿಕೊಂಡಿದ್ದ ಗುಡಿಸಲಿಗೆ ಆಕಸ್ಮಿಕ ಬೆಂಕಿ ಬಿದ್ದು ಲಕ್ಷಾಂತರ ರೂ ನಷ್ಟ ಸಂಭವಿಸಿದೆ.

ಗ್ರಾಮದ ಪಾಪಯ್ಯ ಎಂಬುವವರಿಗೆ ಸೇರಿದ ಗುಡಿಸಲು, ಚಿಲ್ಲರೆ ಅಂಗಡಿಯಾಗಿದ್ದು ಎಂದಿನಂತೆ ಅಂಗಡಿ ಮುಂಭಾಗದಲ್ಲಿ ಕೆಲವು ಜನರು ಎಂದಿನಂತೆ ಮಾತನಾಡುತ್ತಾ ಕುಳಿತಿರುವ ಸಂದರ್ಭದಲ್ಲಿ ಗುಡಿಸಲಿನ ಭಾಗದಲ್ಲಿ ಬೆಂಕಿ ಕಾಣಿಸಿಕೊಂಡಿದೆ.

ಕೆಲವೇ ನಿಮಿಷಗಳಲ್ಲಿ ಬೆಂಕಿಯ ಜ್ವಾಲೆ ಹರಡಿ ಅಂಗಡಿಗೂ ಸಹ ವ್ಯಾಪ್ತಿಸಿದ್ದು ಅಂಗಡಿ ಮತ್ತು ಮನೆಯಲ್ಲಿದ್ದ ಸಾಮಾಗ್ರಿಗಳು ಬೆಂಕಿಯನ್ನು ಸುಟ್ಟು ಹೋಗಿವೆ. ಅಗ್ನಿಶಾಮಕ ಪಡೆ ಆಗಮಿಸಿ ಬೆಂಕಿಯನ್ನು ಹತೋಟಿಗೆ ತಂದಿದೆ.

ಸುದ್ದಿ ತಿಳಿದ ಕೂಡಲೇ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಿವಮ್ಮರಾಜಣ್ಣ, ಅಭಿವೃದ್ದಿ ಅಧಿಕಾರಿ ಪಾಲಯ್ಯ, ಪಂಚಾಯಿತಿ ಸದಸ್ಯರು, ಮುಖಂಡರು ಸ್ಥಳಕ್ಕೆ ದಾವಿಸಿ ಕುಟುಂಬಕ್ಕೆ ಸಾಂತ್ವನ ಹೇಳಿದರಲ್ಲದೆ, ತಾತ್ಕಾಲಿಕವಾಗಿ ಕುಟುಂಬವನ್ನು ಗ್ರಾಮದ ಸಮುದಾಯ ಭವನಕ್ಕೆ ಸ್ಥಳಾಂತರಿಸಿದ್ದಾರೆ.

ಕುಟುಂಬದ ರೋಧನ :- ಕಳೆದ ಹಲವಾರು ವರ್ಷಗಳಿಂದ ಗುಡಿಲಿನಲ್ಲಿ ಸಣ್ಣ ಅಂಗಡಿ ಇಟ್ಟುಕೊಂಡು ವಾಸವಿದ್ದ ಕುಟುಂಬ ದಿಢೀರನೆ ಬೆಂಕಿಯಲ್ಲಿ ಕೆಲವೇ ನಿಮಿಷಗಳಲ್ಲಿ ಬೆಂಕಿ ಎಲ್ಲೆಡೆ ವ್ಯಾಪಿಸಿ ಸಂಪೂರ್ಣವಾಗಿ ಸುಟ್ಟು ಹೋಗಿದ್ದು, ಇಡೀ ಕುಟುಂಬ ಬೀದಿಗೆ ಬಿದ್ದಿದೆ. ಕುಟುಂಬದ ಸದಸ್ಯರ ರೋಧನ ಮುಗಿಲು ಮುಟ್ಟಿತ್ತು. ಸ್ಥಳದಲ್ಲಿದ್ದ ಗ್ರಾಮಸ್ಥರು ಸಮದಾನ ಪಡಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T